ಸಂಪುಟ : 4 ಸಂಚಿಕೆ : 38 ಪುಟ : 4 ಬೆಲೆ : ರೂ. 4 ಬುಧವಾರ, ಮಾರ್ಚ್, 22, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 38 Pages : 4 Rate : 4 Rs Wednesday, March 22, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ನೀರಾವರಿ ಯೋಜನೆ ಪೂರ್ಣಗೊಳಿಸಲು ಕಟ್ಟುಬದ್ದ: ಸಿಎಂ ಬಸವರಾಜ ಬೊಮ್ಮಾಯಿ




ವಿಜಯಪುರ: ರಾಜ್ಯದಲ್ಲಿನ ನೀರಾವರಿ ಯೋಜನೆ ಪೂರ್ಣಗೊಳಿಸಲು ಕಟ್ಟಿಬದ್ಧವಾಗಿರುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಮುದ್ದೇಬಿಹಾಳದ ನಾಲತಾವಾಡದಲ್ಲಿ ವಿವಿಧ ಅಭಿವೃದ್ಧಿ ಕಾಮಕಾರಿಗಳ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಕೆರೆ ತುಂಬಿಸುವ ಯೋಜನೆಗಳನ್ನು ಸಂಪೂರ್ಣಗೊಳಿಸಲಾಗುತ್ತಿದೆ. ರೇವಣ ಸಿದ್ದೇಶ್ವರ ಏತ ನೀರಾವರಿಗೆ ಅಡಿಗಲ್ಲು ಹಾಕಲಾಗಿದೆ. ರಾಜ್ಯದ ಪಾಲಿನ ನೀರನ್ನು ಸದ್ಬಳಕೆ ಮಾಡಲು ನಮ್ಮ ಸರ್ಕಾರ ಆದ್ಯತೆ ನೀಡಿದೆ. ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಕಿತ್ತೂರು ಅಭಿವೃದ್ಧಿ ಮಂಡಳಿ ರಚಿಸಿ ಅನುದಾನ ನೀಡಲಾಗಿದೆ ಎಂದರು.

ಜಲ ಜೀವನ್ ಮಿಷನ್ ಅಡಿಯಲ್ಲಿ ದೇಶದಲ್ಲಿ 12 ಕೋಟಿ ಮನೆಗಳಿಗೆ ನೀರು ಒದಗಿಸಲಾಗಿದೆ. ಮೂರು ವರ್ಷಗಳಲ್ಲಿ 40 ಲಕ್ಷ ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ಒದಗಿಸಲಾಗಿದೆ. ಮುಂದಿನ ವರ್ಷ 25 ಲಕ್ಷ ಮನೆಗಳಿಗೆ ನೀರು ಒದಗಿಸಲಾಗುತ್ತಿದೆ ವಿಜಯಪುರ ಜಿಲ್ಲೆಯಲ್ಲಿ 4.64 ಲಕ್ಷ ಮನೆಗಳಿಗೆ ಕುಡಿಯುವ ನೀರು ಒದಗಿಸುವ ಗುರಿಯಿದ್ದು, ಈಗಾಗಲೇ 2.87 ಸಾವಿರ ಮನೆಗಳಿಗೆ ನೀರು ಒದಗಿಸಲಾಗಿದೆ .ಜಲಧಾರೆಯಲ್ಲಿ ನಗರ ಪ್ರದೇಶಗಳಲ್ಲಿ3000 ಕೋಟಿ ರೂ.ಗಳನ್ನು ಒಡಗಿಸಿದ್ದು, ಮುಂದಿನ ದಿನಗಳಲ್ಲಿ ಎಲ್ಲಾ ಪ್ರದೇಶಗಳಲ್ಲಿ ನೀರು ಒದಗಿಸಲು ಚಿಂತಿಸಲಾಗಿದೆ ಎಂದು ಅವರು ತಿಳಿಸಿದರು.

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಚಿಮ್ಮನಗಿ, ಮುಳವಾಡಿ, ಗುತ್ತಿ ಬಸವಣ್ಣ, ಕೊಪ್ಪಳ ಏತ ನೀರಾವರಿ ಸೇರಿದಂತೆ ಒಟ್ಟು 9 ನೀರಾವರಿಯ ಪ್ರಕ್ರಿಯೆಗೆ ವೇಗ ನೀಡಲಾಯಿತು. 2009 ತಿಂಗಳಿನಲ್ಲಿ ಚಿಮ್ಮಲಗಿ ಏತನೀರಾವರಿ, ಮುಳವಾಡದ 2 ನೇ ಹಂತದ ಏತ ನೀರಾವರಿಗೆ ಅನುಮೋದನೆ ಪಡೆಯಲಾಯಿತು. ವಿಜಯಪುರ ಜಿಲ್ಲೆಗೆ ಐದು ನದಿಗಳು ಹರಿದರೂ ಬರ ತಪ್ಪಲಿಲ್ಲ. ವಿಜಯಪುರ ಜಿಲ್ಲೆಯ ಎಲ್ಲಾ ಕ್ಷೇತ್ರಗಳ ನೀರಾವರಿಯಾಗುವವರೆಗೂ ಸುಮಾರು 5 ಲಕ್ಷ ಹೆಕ್ಟೇರಿಗೆ ನೀರಾವರಿಯಾಗುವವರೆಗೂ ನಾವು ವಿಶ್ರಮಿಸುವುದಿಲ್ಲ ಎಂದರು.

ಸ್ತ್ರೀ ಶಕ್ತಿ ಸಂಘಗಳಿಗೆ ಸ್ವಯಂ ಉದ್ಯೋಗಕ್ಕಾಗಿ 20 ಸಾವಿರ ಹಣ ಬಿಡುಗಡೆ ಮಾಡಲಾಗುತ್ತಿದೆ. ಸ್ವಾಮಿ ವಿವೇಕಾನಂದ ಯೋಜನೆಯನ್ನು 23 ರಂದು 13 ಸಾವಿರ ಯುವಶಕ್ತಿ ಕೇಂದ್ರಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು. ಈ ಮೂಲಕ ಕಾಯಕ ಕ್ರಾಂತಿ ಮಾಡಬೇಕು ಎಂದರು. ಎಸ್.ಸಿ.ಎಸ್ .ಟಿ ಗಳಿಗೆ ಮೀಸಲಾತಿ ಹೆಚ್ಚಿಸಿ ಸಾಮಾಜಿಕ ನ್ಯಾಯ–ಕ್ಕೆ ಒತ್ತು ನೀಡಲಾಗಿದೆ. ಎಲ್ಲಾ ವರ್ಗಕ್ಕೆ ನ್ಯಾಯ ನೀಡುವ ಕೆಲಸ ಮಾಡಿದ್ದೇವೆ. ಮುದ್ದೇಬಿಹಾಳ ಮಾದರಿ ಯಾಗುವಂತೆ ಕೆಲಸ ಮಾಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

## ವಿಧಾನಸಭೆ ಚುನಾವಣೆ: ಎಲ್ಲೆಡೆ ತೀವ್ರ ನಿಗಾ

### ಜಿಲ್ಲೆಯಲ್ಲಿ ರೂ. 1.49 ಕೋಟಿ ನಗದು, ಮದ್ಯ, ಇತರೆ ವಸ್ತು ವಶ: ಜಿಲ್ಲಾಧಿಕಾರಿ



ಬೆಳಗಾವಿ: ಮುಂಬರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಗೋವಾ ಮತ್ತು ಮಹಾರಾಷ್ಟ್ರ ಗಡಿಭಾಗದಲ್ಲಿ ಸದ್ಯಕ್ಕೆ 24 ಅಂತರರಾಜ್ಯ ಗಡಿ ಚೆಕ್ ಪೋಸ್ಟ್ ಆರಂಭಿಸಲಾಗಿದೆ. ಗೋವಾ ಗಡಿಭಾಗದಲ್ಲಿ 4 ಮತ್ತು ಮಹಾರಾಷ್ಟ್ರ ಗಡಿಭಾಗದಲ್ಲಿ 20 ಚೆಕ್ ಪೋಸ್ಟ್ ಈಗಾಗಲೇ ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯಾದ್ಯಂತ ಚೆಕ್ ಪೋಸ್ಟ್ ನಲ್ಲಿ ನಗದು, ಮದ್ಯ ಸೇರಿದಂತೆ ಒಟ್ಟಾರೆ 1.49 ಕೋಟಿ ರೂಪಾಯಿ ಮೊತ್ತದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಂಗಳವಾರ (ಮಾ.21) ನಡೆದ ಚುನಾವಣಾ ಪೂರ್ವಸಿದ್ಧತೆ ಕುರಿತ ವಿಡಿಯೋಸಂವಾದ ಸಭೆಯಲ್ಲಿ ಅವರು ಈ ವಿಷಯ ತಿಳಿಸಿದರು.

ಚುನಾವಣಾ ಆಯೋಗದ ನಿರ್ದೇಶನದ ಪ್ರಕಾರ ಅನಧಿಕೃತ ಬ್ಯಾನರ್, ಪೋಸ್ಟರ್, ಗೋಡೆಬರಹಗಳನ್ನು ತೆರವುಗೊಳಿಸಬೇಕು ಎಂದು ಪಾಲಿಕೆಯ ಆಯುಕ್ತರಿಗೆ ತಿಳಿಸಿದರು.

ಅನಧಿಕೃತವಾಗಿ ಪೋಸ್ಟರ್, ಬ್ಯಾನರ್ ಹಾಕದಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು.

ಒಂದು ವೇಳೆ ಸೂಚನೆ ಬಳಿಕವೂ ಅಂಟಿಸದರೆ ಅಂತಹವರಿಂದಲೇ ಅವುಗಳನ್ನು ತೆರವುಗೊಳಿಸುವ ಶುಲ್ಕ ವಸೂಲಿ ಮಾಡಬೇಕು ಎಂದು ಸೂಚನೆ ನೀಡಿದರು.

ಮಾದರಿ ನೀತಿಸಂಹಿತೆ ಜಾರಿಗೆ ಬಂದ ಬಳಿಕ ಚುನಾವಣಾ ಪ್ರಚಾರ–ಕ್ಕೆ ಸಂಬಂಧಿಸಿದಂತೆ ಪ್ರತಿಯೊಂದು ಅನುಮತಿಯನ್ನು ಆಯಾ ಕ್ಷೇತ್ರದ ಚುನಾವಣಾಧಿಕಾರಿಗಳು ಏಕಗವಾಕ್ಷಿ ವ್ಯವಸ್ಥೆ ಮೂಲಕ ನೀಡಬೇಕು. ಈ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಯ ಜತೆ ಸಮನ್ವಯ ಸಾಧಿಸಿ ಏಕ ಗವಾಕ್ಷಿ ವ್ಯವಸ್ಥೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ನಗರ ಪೊಲೀಸ್ ಆಯುಕ್ತರಾದ ಡಾ.ಎಂ.ಬಿ.ಬೋರಲಿಂಗಯ್ಯ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ ಪಾಟೀಲ ಉಪಸ್ಥಿತರಿದ್ದರು.

## ಇಂದು ಕೈ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ: ಡಿ.ಕೆ.ಶಿ



ಮಂಡ್ಯ: ವಿಧಾನಸಭಾ ಚುನಾವಣೆಗೆ ಬುಧವಾರ ಪಕ್ಷದ ನೂರಕ್ಕೂ ಹೆಚ್ಚು ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗ–'ಡೆ ಮಾಡಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ಟಿಕೆಟ್ ಘೋಷಣೆಗೂ ಮುನ್ನ ಮಂಡ್ಯದ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಠಕ್ಕೆ ತೆರಳಿ ಮಂಗಳವಾರ ಕಾಲಭೈರವೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿದರು. ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ ಸಿದ್ಧವಾಗಿದೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕರ್ನಾಟಕಕ್ಕೆ ಭೇಟಿ ನೀಡಿ ದೆಹಲಿಗೆ ವಾಪಸ್ ಆದ ಮೇಲೆ ಪಟ್ಟಿ ಬಿಡುಗಡೆ ಮಾಡಲಾಗುವುದು ಎಂದು ಹೇಳಲಾಗಿತ್ತು. ಅದರಂತೆ ನಾಳೆ ಅಂ–ದರೆ ಯುಗಾದಿ ದಿನ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಲಾಗುವುದು ಎಂದು ಡಿಕೆಶಿ ಹೇಳಿದರು.

ಇದೇ ವೇಳೆ ಸಿದ್ದರಾಮಯ್ಯ ಸ್ಪರ್ಧೆ ಬಗ್ಗೆ ಮಾತನಾಡಿ, ಯಾರು ಕೂಡ ಹಿಂದೆ ಸರಿಯುತ್ತಿಲ್ಲ. ಸಿದ್ದರಾಮಯ್ಯ ಅವರು ಬಯಸಿದ ಕ್ಷೇತ್ರದಲ್ಲಿ ಸ್ಪರ್ಧೆಗೆ ಅವಕಾಶವಿದೆ. ಕೋಲಾರ, ವರುಣ, ಬಾದಾಮಿ, ಚಾಮುಂಡೇಶ್ವರಿ ಯಾವುದಾದರೂ ಕ್ಷೇತ್ರವನ್ನು ಆಯ್ಕೆ ಮಾಡಲಿ. ಅವರ ಅನುಕೂಲ ನೋಡಿಕೊಂಡು ತೀರ್ಮಾನ ಮಾಡಲಿ. ಎಲ್ಲಿ ತೀರ್ಮಾನ ಮಾಡ್ತಾರೋ ಅಲ್ಲೇ ಅವಕಾಶ ಕೊಡ್ತೀವಿ ಎಂದರು.

ಡಿ.ಕೆ.ಸುರೇಶ್ ಸ್ಪರ್ಧೆಗೆ ಹೈಕಮಾಂಡ್ ಒತ್ತಡ ಕುರಿತು ಮಾತನಾಡಿ, ಸಂಸದರಾಗಿ ಇರಬೇಕೆಂದು ಡಿ.ಕೆ.ಸುರೇಶ್ ಬಯಸಿದ್ದಾರೆ. ನಮ್ಮ ಅಭ್ಯರ್ಥಿಯನ್ನು ನಾವು ಗೆಲ್ಲಿಸಿಕೊಳ್ಳುತ್ತೇವೆ. ಯಾರೇ ಅಭ್ಯರ್ಥಿ ಆದರೂ ಡಿ.ಕೆ.ಶಿವಕುಮಾರ್, ಡಿ.ಕೆ.ಸುರೇಶ್ ಅಭ್ಯರ್ಥಿ ಎಂದು ಮತ ಕೇಳ್ತೇವೆ. ಜನರು ನಮ್ಮ ಅಭ್ಯರ್ಥಿ ಗೆಲ್ಲಿಸುತ್ತಾರೆ. ನಾರಾಯಣಗೌಡ ಕಾಂಗ್ರೆಸ್ ಸೇರ್ಪಡೆ ವಿಚಾರ ಗೊತ್ತಿಲ್ಲ. ನಾನು ಯಾರಿಗೂ ಪೊಲಿಟಿಕಲಿ ಡ್ಯಾಮೇಜ್ ಮಾಡಲ್ಲ. ಈ ಬಗ್ಗೆ ನಾರಾಯಣಗೌಡರನ್ನೇ ಕೇಳಬೇಕು ಎಂದು ಸ್ಪಷ್ಟಪಡಿಸಿದರು.

ಉರಿಗೌಡ–ನಂಜೇಗೌಡ ವಿವಾದ ಕುರಿತು ಪ್ರತಿಕ್ರಿಯಿಸಿ, ಶ್ರೀಗಳು ಬಿಜೆಪಿ ನಾಯಕರಿಗೆ ಬುದ್ದಿ ಹೇಳಿದ್ದೆ ತಪ್ಪು. ಸಿ.ಟಿ.ರವಿ, ಅಶ್ವಥ್ ನಾರಾಯಣನೇ ಉರಿಗೌಡ, ನಂಜೇಗೌಡ. ಬೇರೆ ಯಾರೂ ಅಲ್ಲ. ಪಠ್ಯಕ್ಕೆ ಉರಿಗೌಡ, ನಂಜೇಗೌಡ ವಿಷಯ ಸೇರಿಸುವ ಯಾವ ವಿಷಯವೂ ಇಲ್ಲ. ಯಾವ ಪಠ್ಯನೂ ಇಲ್ಲ. ಎಲ್ಲ ಮೇಷ್ಟ್ರುಗಳನ್ನ ಕೇಳೋಕೆ ಹೇಳಿ. ಅಶ್ವಥ್ ನಾರಾಯಣ್, ಸಿ.ಟಿ.ರವಿಗೆ ಅವರ ಮೇಷ್ಟ್ರು ಹೇಳ್ಕೊಟ್ಟಿದ್ರಾ ಎಂದು ತರಾಟೆಗೆ ತೆಗೆದುಕೊಂಡರು.

ಕಾಲಭೈರೇಶ್ವರನಿಗೆ ಪೂಜೆ ಸಲ್ಲಿಸಿದ ಬಳಿಕ ನಿರ್ಮಲಾನಂದನಾಥ ಶ್ರೀಗಳನ್ನು ಡಿಕೆಶಿ ಭೇಟಿಯಾಗಿ ಚರ್ಚೆ ನಡೆಸಿದರು. ನಿನ್ನೆಯಷ್ಟೇ ಉರಿಗೌಡ, ನಂಜೇಗೌಡ ಕುರಿತು ಸ್ವಾಮೀಜಿ ಮಾತನಾಡಿದ್ದರು. ಇದರ ಬೆನ್ನಲ್ಲೇ ಶ್ರೀಗಳನ್ನು ಡಿಕೆಶಿ ಭೇಟಿಯಾಗಿರುವುದು ಕುತೂಹಲ ಮೂಡಿಸಿದೆ.

## ಮುಂಬೈನಿಂದ ಗದಗ ನಗರಕ್ಕೆ ಸಾಗಿಸುತ್ತಿದ್ದ 4 ಕೆಜಿ ಬಂಗಾರ ಸೀಜ್



ಗದಗ: ಚುನಾವಣೆ ಹೊತ್ತಿನಲ್ಲಿ ಗದಗ ಜಿಲ್ಲಾ ಪೊಲೀಸರು ಭರ್ಜರಿ ಕಾರ್ಯಾಚರಣೆಗೆ ಇಳಿದಿದ್ದು, ಚಿನ್ನದ ಬೇಟೆ–ಯಾಡಿದ್ದಾರೆ. ಮುಂಬೈನಿಂದ ಗದಗ ನಗರಕ್ಕೆ ತರುತ್ತಿದ್ದ 4 ಕೆಜಿ ತೂಕದ ಚಿನ್ನಾಭರಣಗಳನ್ನು ನಗರದ ಹೊರವಲಯದ ಚೆಕ್‌ಪೋಸ್ಟ್ ನಲ್ಲಿ ಪೊಲೀಸರು ಜಪ್ತಿ ಮಾಡಿದ್ದಾರೆ.

ಜಿಲ್ಲಾಧಿಕಾರಿ ಎಮ್.ಎಲ್ ವೈಶಾಲಿ, ಎಸ್ಪಿ ಬಿ.ಎಸ್ ನೇಮಗೌಡ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆದಿದ್ದು, ಸೂಕ್ತ ದಾಖಲೆಗಳಿಲ್ಲದೇ ಸಾಗಿಸುತ್ತಿದ್ದ ಚಿನ್ನಾಭರಣಗಳನ್ನ ವಶಕ್ಕೆ ಪಡೆಯಲಾಗಿದೆ.

ಮಹಿಪಾಲ್ ಜೈನ್, ಅಭಿಷೇಕ್ ಜೈನ್ ಎಂಬವರಿಗೆ ಸೇರಿದ ಚಿನ್ನಾಭರಣಗಳು ಇದಾಗಿದ್ದು, ಸುಮಾರು 1.75 ಕೋಟಿ ರೂ. ಮೌಲ್ಯದ್ದಾಗಿದೆ. ಸದ್ಯ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಂಗಳವಾರ ಬೆಳಗ್ಗೆಯಷ್ಟೇ ಅಕ್ರಮವಾಗಿ ಸಾಗಿಸುತ್ತಿದ್ದ 24.50 ಲಕ್ಷ ರೂ. ಹಣವನ್ನು ಮುಳಗುಂದದ ಬಸಾಪೂರ ಬಳಿಯ ಚೆಕ್ ಪೋಸ್ಟ್ ನಲ್ಲಿ ಸೀಜ್ ಮಾಡಲಾಗಿತ್ತು. ಈ ಬೆನ್ನಲ್ಲೇ ಇದು 2ನೇ ದಾಳಿಯಾಗಿದೆ.

## 40 ಸಾವಿರ ರೂ. ಲಂಚ : ಲೋಕಾಯುಕ್ತ ಬಲೆಗೆ ಬಿದ್ದ ಪಿಎಸ್ಐ ಮತ್ತು ಪೇದೆ



ಹಾವೇರಿ: ರಾಣೆಬೆನ್ನೂರು ಶಹರ ಪೊಲೀಸ್ ಠಾಣೆ ಪಿಎಸ್ಐ ಮತ್ತು ಪೇದೆ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. 40 ಸಾವಿರ ರೂ. ಲಂಚ ಪಡೆಯುತ್ತಿದ್ದ ಸಮಯದಲ್ಲಿ ಲೋಕಾಯುಕ್ತ ಅಧಿಕಾರಿಗಳಿಗೆ ರೆಡ್ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ. ಶಹರ ಠಾಣೆ ಪಿಎಸ್ಐ ಸುನೀಲ ತೇಲಿ ಮತ್ತು ಈತನ ವಾಹನದ ಚಾಲಕ ಸಚೀನ ಲೋಕಾಯುಕ್ತ ಬಲೆಗೆ ಬಿದ್ದ ಆರೋಪಿಗಳು. ವ್ಯಕ್ತಿಯೊಬ್ಬರಿಂದ ಮನೆ ಬಾಡಿಗೆ ವಸೂಲಿ ಮಾಡಿಸಿಕೊಡುವ ವಿಚಾರಕ್ಕೆ 50 ಸಾವಿರ ರೂ. ಬೇಡಿಕೆ ಇಟ್ಟಿದ್ದರು. ವ್ಯಕ್ತಿಯೊಬ್ಬರ ಬಳಿ ಲಂಚ–ಕ್ಕೆ ಬೇಡಿಕೆ ಇಟ್ಟಿದ್ದ ಬಗ್ಗೆ ಖಚಿತ ಮಾಹಿತಿ ಲಭ್ಯವಾದ ಮೇರೆಗೆ ದಾವಣಗೆರೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಸದ್ಯ ಆರೋಪಿ ಸ್ಥಾನದಲ್ಲಿರುವ ಪೊಲೀಸರು ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದು, ಹೆಚ್ಚಿನ ವಿಚಾರಣೆಗೆ ಒಳಪಡಿಸಿದ್ದಾರೆ.

## ಖಲಿಸ್ತಾನಿಗಳಿಂದ ತ್ರಿವರ್ಣಕ್ಕೆ ಅವಮಾನ: ಯುಕೆಯಲ್ಲಿ ಭಾರತೀಯ ಸಮುದಾಯದ ಮುಖಂಡರ ಸಭೆ



ದೆಹಲಿ: ಮಾ.19 ರಂದು ಯುನೈಟೆಡ್ ಕಿಂಗ್‌ಡಂ (ಯುಕೆ) ನಲ್ಲಿರುವ ಭಾರತೀಯ ಹೈಕಮಿಷನ್‌ಲ್ಲಿ ಖಲಿಸ್ತಾನಿ ಪ್ರತ್ಯೇಕತಾವಾದಿಗಳಿಂದ ತ್ರಿವರ್ಣಕ್ಕೆ ಅವಮಾನವಾಗಿದ್ದಕ್ಕೆ ಭಾರತದ ಹೈ ಕಮಿಷನರ್ ವಿಕ್ರಮ್ ದೊರೈಸ್ವಾಮಿ ಘಟನೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಭೆ ನಡೆಸಿದರು.

ಇಂಡಿಯಾ ಹೌಸ್‌ನಲ್ಲಿ ನಡೆದ ಸಭೆಯಲ್ಲಿ ಡೆಪ್ಯುಟಿ ಹೈಕಮಿಷನರ್ ಸುಜಿತ್ ಘೋಷ್ ಕೂಡ ಉಪಸ್ಥಿತರಿದ್ದರು ಎಂದು ಲಂಡನ್‌ನಲ್ಲಿರುವ ಭಾರತೀಯ ಹೈಕಮಿಷನ್ ಟ್ವಿಟರ್‌ನಲ್ಲಿ ಬರೆದುಕೊಂಡಿದೆ.

ದಾಳಿ ನಡೆದ ತಕ್ಷಣ, ಲಂಡನ್‌ನಲ್ಲಿರುವ ಭಾರತೀಯ ಹೈಕಮಿಷನ್ ವಿರುದ್ಧ ಪ್ರತ್ಯೇಕತಾವಾದಿ ಮತ್ತು ಉಗ್ರಗಾಮಿ ಅಂಶಗಳು ಕೈಗೊಂಡ ಕ್ರಮಗಳ ಬಗ್ಗೆ ಭಾರತದ ತೀವ್ರ ಟೀಕೆ ಮಾಡಿದ್ದು, ನವದೆಹಲಿಯಲ್ಲಿರುವ ಯುಕೆ ಹಿರಿಯ ರಾಜತಾಂತ್ರಿಕರನ್ನು ಕರೆಸಲಾಯಿತು.

ಖಲಿಸ್ತಾನಿಗಳು ಹೈಕಮಿಷನ್ ಆವರಣಕ್ಕೆ ಪ್ರವೇಶಿಸಲು ಅನುಮತಿ ನೀಡಿದ ಬ್ರಿಟಿಷ್ ಭದ್ರತೆಯ ಸಂಪೂರ್ಣ ಕೊರತೆಯನ್ನು ಭಾರತ ಪ್ರಶ್ನಿಸಿತು.

ಯುನೈಟೆಡ್ ಕಿಂಗ್‌ಡಂನಲ್ಲಿರುವ ಭಾರತೀಯ ಹೈಕಮಿಷನ್ ಮೇಲೆ ನಡೆದ ದಾಳಿಯನ್ನು ಬ್ರಿಟಿಷ್ ಹೈಕಮಿಷನರ್ ಅಲೆಕ್ಸ್ ಎಲ್ಲಿಸ್ ಕೂಡ ಖಂಡಿಸಿದ್ದರು. "ಭಾರತದ ಹೈಕಮಿಷನ್‌ನ ಆವರಣದ ವಿರುದ್ಧ ನಡೆಯುತ್ತಿರುವ ಅವಮಾನಕರ ಕೃತ್ಯಗಳನ್ನು ನಾನು ಖಂಡಿಸುತ್ತೇನೆ –ಇವು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ" ಎಂದು ಭಾರತದಲ್ಲಿನ ಬ್ರಿಟಿಷ್ ಹೈ ಕಮಿಷನರ್ ಅಲೆಕ್ಸ್ ಎಲ್ಲಿಸ್ ಟ್ವೀಟ್ ಮಾಡಿದ್ದಾರೆ.

## ಗೂಡ್ಸ್ ವಾಹನದಲ್ಲಿ ಪ್ರಯಾಣ: ಪ್ರಕರಣ ದಾಖಲಿಸಲು ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಗೂಡ್ಸ್ ವಾಹನಗಳಲ್ಲಿ ಪ್ರಯಾಣಿಕರನ್ನು ಕರೆದೊಯ್ಯವುದು ಕಂಡುಬಂದರೆ ಅಂತಹ ವಾಹನಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಎಚ್ಚರಿಕೆ ನೀಡಿದ್ದಾರೆ.

ಗೂಡ್ಸ್ ವಾಹನಗಳಲ್ಲಿ ಜನರನ್ನು ಕರೆದೊಯ್ಯುವುದನ್ನು ಚುನಾವಣಾ ಆಯೋಗ ಕೂಡ ಗಂಭೀರವಾಗಿ ಪರಿಗಣಿಸಿದೆ.

ಗೂಡ್ಸ್ ವಾಹನಗಳಲ್ಲಿ ಜನರನ್ನು ಕರೆದೊಯ್ಯುವುದನ್ನು ಮೋಟಾರು ವಾಹನ ಕಾಯ್ದೆ ಪ್ರಕಾರ ನಿಷೇಧಿಸಲಾಗಿರುತ್ತದೆ.

ಪೊಲೀಸ್ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಇಂದಿನಿಂದ ಜಿಲ್ಲೆಯಾದ್ಯಂತ ತೀವ್ರ ತಪಾಸಣೆ ನಡೆಸಲಿದ್ದಾರೆ. ಕಾನೂನು ಉಲ್ಲಂಘನೆ ಕಂಡುಬಂದರೆ ಕಠಿಣ ಕ್ರಮವನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ.

ಸುರಕ್ಷಿತ ಪ್ರಯಾಣದ ದೃಷ್ಟಿಯಿಂದ ಸಾರ್ವಜನಿಕರು ಗೂಡ್ಸ್ ವಾಹನಗಳಲ್ಲಿ ಸಂಚರಿಸಬಾರದು. ವಾಹನ ಮಾಲೀಕರು ಕೂಡ ಇದಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

## ಐಶ್ವರ್ಯಾ ರಜನಿಕಾಂತ್ ಮನೆಯಲ್ಲಿ ಚಿನ್ನಾಭರಣ ಕಳವು, ದೂರು ದಾಖಲು



ಚೆನ್ನೈ: ಸೂಪರ್ ಸ್ಟಾರ್ ರಜನಿಕಾಂತ್ ಅವರ ಹಿರಿಯ ಪುತ್ರಿ ಐಶ್ವರ್ಯಾ ರಜನಿಕಾಂತ್ ಅವರ ಲಾಕರ್ ನಿಂದ ಚಿನ್ನಾಭರಣ ಕಳವು ಆಗಿರುವ ಬಗ್ಗೆ ತೆನಾಂಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

2019 ರಲ್ಲಿ ಸಹೋದರಿ ಸೌಂದರ್ಯ ಅವರ ಮದುವೆಗೆಂದು ಬಳಸಿದ್ದ ಸುಮಾರು 3.60 ಲಕ್ಷ ರೂ. ಮೌಲ್ಯದ 60 ಪವನ್ ಚಿನ್ನಾಭರಣ ಕಳ್ಳತನವಾಗಿದೆ. ಮನೆಯಲ್ಲಿ ಕೆಲಸ ಮಾಡುವ ಕೆಲಸಗಾರರು ಕಳ್ಳತನ ಮಾಡಿರಬಹುದು ಎಂದು ಐಶ್ವರ್ಯಾ ರಜನಿಕಾಂತ್ ನೀಡಿರುವ ದೂರಿನಲ್ಲಿ ಅನುಮಾನ ವ್ಯಕ್ತಪಡಿಸಿದ್ದಾರೆ. ದೂರಿನ ಮೇರೆಗೆ ತೇನಂಪೇಟೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಎಫ್ಐ ನಲ್ಲಿ ನಮೂದಿಸಿರುವ ಕದ್ದ ಚಿನ್ನಾಭರಣಗಳ ಅಂದಾಜು ಮೌಲ್ಯ 3.6 ಲಕ್ಷ ರೂ.ಗಳಾಗಿದೆ. ಲಾಕರ್ ಐಶ್ವರ್ಯಾ ಅವರ ಬಳಿ ಇದ್ದರೂ ಅದನ್ನು ಹಲವು ಬಾರಿ ಸ್ಥಳಾಂತರಿಸಲಾಗಿದೆ. ಏಪ್ರಿಲ್ 9, 2022 ರಂದು, ಲಾಕರ್ ನಟ ರಜನಿಕಾಂತ್ ಅವರ ಬೋಯಸ್ ಗಾರ್ಡನ್ ನಿವಾಸಕ್ಕೆ ಸ್ಥಳಾಂತರಗೊಂಡಿತು. ಲಾಕರ್ನ ಕೀಲಿಗಳನ್ನು ಸೇಂಟ್ ಮೇರಿಸ್ ರಸ್ತೆಯ ಫ್ಲಾಟ್ನಲ್ಲಿರುವ ನನ್ನ ವೈಯಕ್ತಿಕ ಕಬ್ಬಿಣದ ಕಪಾಟಿನಲ್ಲಿ ಇರಿಸಲಾಗಿತ್ತು ಎಂದು ಐಶ್ವರ್ಯ ಹೇಳಿದ್ದಾರೆ.

ನನ್ನ ಸಿಬ್ಬಂದಿಗೆ ಇದು ತಿಳಿದಿದೆ. ನನ್ನ ಅನುಪಸ್ಥಿತಿಯಲ್ಲಿ ಅವರು ಆಗಾಗ್ಗೆ ಅಪಾರ್ಟ್ಮೆಂಟ್ಗೆ ಭೇಟಿ ನೀಡುತ್ತಾರೆ ಎಂದು ಐಶ್ವರ್ಯಾ ರಜನಿಕಾಂತ್ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಫೆಬ್ರವರಿ 10 ರಂದು ಲಾಕರ್ ಅನ್ನು ಪರಿಶೀಲಿಸಿದಾಗ, ತನ್ನ ಮದುವೆಯಲ್ಲಿ ಖರೀದಿಸಿದ್ದ ಆಭರಣಗಳು ಕಾಣೆಯಾಗಿವೆ ಎಂದು ಐಶ್ವರ್ಯಾ ಹೇಳಿದರು. ಆಕೆಯ ದೂರಿನ ಆಧಾರದ ಮೇಲೆ ತೇನಂಪೇಟೆ ಪೊಲೀಸರು ಐಪಿಸಿ ಸೆಕ್ಷನ್ 381 (ಮನೆಕೆಲಸಗಾರರಿಂದ ಕಳ್ಳತನ) ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಬಿಜೆಪಿ ನಾಯಕರುಗಳಿಗೆ ನಿರ್ಮಲಾನಂದ ಶ್ರೀಗಳು ಬುದ್ಧಿ ಹೇಳಿದ್ದೆ ತಪ್ಪು: ಡಿಕೆಶಿ



ಮಂಡ್ಯ: ಉರಿಗೌಡ ಮತ್ತು ನಂಜೇಗೌಡ ವಿಚಾರದಲ್ಲಿ ಬಿಜೆಪಿ ನಾಯಕರುಗಳಿಗೆ ನಿರ್ಮಲಾನಂದ ಸ್ವಾಮೀಜಿ ಅವರು ಬುದ್ಧಿ ಹೇಳಿದ್ದೆ ತಪ್ಪು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಆದಿಚುಂಚನಗಿರಿ ಮಠದಲ್ಲಿಂದು ಮಾತನಾಡಿದ ಡಿಕೆಶಿ, ಉರಿಗೌಡ ಹಾಗೂ ನಂಜೇಗೌಡ ಬೇರೆ ಯಾರು ಅಲ್ಲ, ಸಿಟಿ ರವಿ ಮತ್ತು ಅಶ್ವಥ್ ನಾರಾಯಣ ಅವರೇ ಎಂದರು.

ನಮ್ಮ ಮಠಕ್ಕೆ ನಾನು ಬರುವುದು ಮತ್ತು ಪೂಜೆ ಮಾಡುವುದು ಸಾಮಾನ್ಯ. ಇದರಲ್ಲಿ ಯಾವುದೇ ರಾಜಕಾರಣ ಇಲ್ಲ. ಅಮಾವಾಸ್ಯೆ ಪೂಜೆಯು ಕಾಲಭೈರವನ ಪ್ರಸಿದ್ಧ ಧಾರ್ಮಿಕ ಕಾರ್ಯವಾಗಿದೆ. ಹೀಗಾಗಿ ಇಂದು ಕುಟುಂಬ ಸಮೇತವಾಗಿ ಬಂದು ಪೂಜೆ ಸಲ್ಲಿಸಿದ್ದೇನೆ ಎಂದು ಹೇಳಿದರು.

ನಾಳೆ ನೂರಕ್ಕೂ ಹೆಚ್ಚು ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ ಆಗಲಿದೆ. ಬಿಜೆಪಿ ನಾಯಕರಿಗೆ ಶ್ರೀಗಳು ಬುದ್ಧಿ ಹೇಳುವ ಅವಶ್ಯಕತೆ ಇಲ್ಲ. ಈ ಸಮಾಜ ಯಾರನ್ನು ಭಿಕ್ಷೆ ಬೇಡುವ ಅವಶ್ಯಕತೆ ಇಲ್ಲ. ಸಿಟಿ ರವಿ, ಅಶ್ವಥ್ ನಾರಾಯಣ ಹಾಗೂ ಶೋಭಾ ಕರಂದ್ಲಾಜೆ ಹೊಸ ಹೊಸ ಇತಿಹಾಸ ಬರೆಯುತ್ತಿದ್ದಾರೆ. ಮುನಿರತ್ನ ಒಬ್ಬ ಬ್ಯುಸಿನೆಸ್ ಮ್ಯಾನ್. ಆತ ನೂರಾರು ಸಿನಿಮಾ ಮಾಡಿಕೊಳ್ಳಲಿ.

ಒಕ್ಕಲಿಗರಿಗೆ ಅರಗಿಸಿಕೊಳ್ಳುವ ಶಕ್ತಿ ಇದೆ. ಒಕ್ಕಲಿಗರ ಸಮುದಾಯಕ್ಕೆ ಕಳಂಕ ತರುವ ಕೆಲಸ ಮಾಡಲಾಗ್ತಿದೆ. ಆದರೆ ಒಕ್ಕಲಿಗರು ಇದರಿಂದ ಹಿಂಜರಿಯುವುದಿಲ್ಲ. ನಮ್ಮ ಸ್ವಾಮಿಗಳು ಅವರನ್ನು ಕರೆದು ಮಾತನಾಡಿದ್ದೆ ತಪ್ಪು. ಇದು ಸ್ವಾಭಿಮಾನದ ಪ್ರಶ್ನೆಯಾಗಿದೆ. ಸರ್ಕಾರದ ಭ್ರಷ್ಟಾಚಾರ ಮರೆಮಾಚಲು ಕಥೆ ಕಟ್ಟಿದ್ದಾರೆ ಎಂದು ಕಿಡಿಕಾರಿದರು.

ಸದ್ಯ ಪರಿಸ್ಥಿತಿಯಲ್ಲಿ ಬದುಕಿನ ಬಗ್ಗೆ ಯೋಚಿಸಬೇಕಿದೆ. ಎಲ್ಲ ವಸ್ತುಗಳ ಬೆಲೆ ಏರಿಕೆಯಾಗಿದೆ. ಅದರ ಬಗ್ಗೆ ಮಾತಾಡಬೇಕಿದೆ. ಸಮಸ್ಯೆಗಳಿಗೆ ಪರಿಹಾರ ನೀಡುವ ಕೆಲಸ ಮಾಡಬೇಕಿದೆ ಎಂದು ಹೇಳಿದರು. ಇದೇ ವೇಳೆ ಪಠ್ಯಕ್ಕೆ ಉರಿಗೌಡ ಹಾಗೂ ನಂಜೇಗೌಡ ವಿಷಯ ಸೇರಿಸುವ ವಿಚಾರವಾಗಿ ಮಾತನಾಡಿ, ಯಾವ ಪಠ್ಯನೂ ಇಲ್ಲ. ಎಲ್ಲ ಮೇಷ್ಟ್ರ ಗಳನ್ನು ಕೇಳೋಕೆ ಹೇಳಿ. ಅಶ್ವಥ್ ನಾರಾಯಣ್ ಹಾಗೂ ಸಿ.ಟಿ.ರವಿಗೆ ಅವರ ಮೇಷ್ಟ್ರು ಹೇಳ್ಕೊಟ್ಟಿದ್ರಾ ಕೇಳೊಕೆ ಹೇಳಿ ಎಂದು ಟಾಂಗ್ ನೀಡಿದರು.

ಸಿದ್ದರಾಮಯ್ಯ ಅವರು ಕೋಲಾರದ ಚುನಾವಣಾ ಕಣದಿಂದ ಹಿಂದೆ ಸರಿದ ವಿಚಾರವಾಗಿ ಪ್ರತಿಕ್ರಿಯಿಸಿ, ಯಾರು ಹಿಂದೆ ಸರಿಯುತ್ತಿಲ್ಲ. ಅವರು ಬಯಸಿದ ಕ್ಷೇತ್ರದಲ್ಲಿ ಸ್ಪರ್ಧೆಗೆ ಅವಕಾಶ ಮಾಡಿಕೊಡಲಾಗಿದೆ. ಕೋಲಾರ, ವರುಣ, ಬಾದಾಮಿ ಹಾಗೂ ಚಾಮುಂಡೇಶ್ವರಿ ಯಾವುದಾದರೂ ಆಯ್ಕೆ ಮಾಡಲಿ. ಅವರ ಅನುಕೂಲ ನೋಡಿಕೊಂಡು ತೀರ್ಮಾನ ಮಾಡಲಿ. ಎಲ್ಲಿ ತೀರ್ಮಾನ ಮಾಡ್ತಾರೋ ಅಲ್ಲೇ ಅವಕಾಶ ಕೊಡುತ್ತೇವೆ ಎಂದರು.

## ಸೂಕ್ತ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 9 ಲಕ್ಷ ನಗದು ವಶ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ: ಸೂಕ್ತ ದಾಖಲಾತಿಗಳಲ್ಲದೇ ಸಾಗಿಸಲಾಗುತ್ತಿದ್ದ 9 ಲಕ್ಷ ರೂಪಾಯಿ ನಗದು ಹಣವನ್ನು ಕಣಬರಗಿ ಚೆಕ್ ಪೋಸ್ಟ್ ನಲ್ಲಿ ಮಂಗಳವಾರ(ಮಾ.21) ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಬೆಳಗಾವಿ ನಗರದಿಂದ ಅಂಕಲಗಿ ಕಡೆಗೆ ಹೊರಟಿದ್ದ ಕಾರನ್ನು ಕಣಬರಗಿ ಚೆಕ್ ಪೋಸ್ಟ್ ನಲ್ಲಿ ತಪಾಸಣೆ ನಡೆಸಿದಾಗ ನಗದು ಪತ್ತೆಯಾಗಿದೆ.

ನಗದು ಹಣವು ಖಾಸಗಿ ಫೈನಾನ್ಸ್ ಕಂಪನಿಗೆ ಸೇರಿದೆ. ಆದರೆ ಸದರಿ ಹಣಕ್ಕೆ ಸಂಬಂಧಿಸಿದಂತೆ ಸಮರ್ಪಕ ದಾಖಲೆಗಳನ್ನು ಅವರು ಒದಗಿಸಿರುವುದಿಲ್ಲ. ಇದಲ್ಲದೇ ಹಣ ಸಾಗಾಣಿಕೆಗೆ ಸಂಬಂಧಿಸಿದಂತೆ ಇರುವ ನಿಗದಿತ ಎಸ್.ಓ.ಪಿ.ಯನ್ನು ಕೂಡ ಪಾಲಿಸದಿರುವುದು ಕಂಡುಬಂದಿದೆ. ಸದರಿ ಹಣವನ್ನು ವಶಪಡಿಸಿಕೊಳ್ಳಲಾಗಿದ್ದು, ನಿಯಮಾವಳಿ ಪ್ರಕಾರ ಮುಂದಿನ ಕ್ರಮವನ್ನು ತೆಗೆದುಕೊಳ್ಳುವುದಾಗಿ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಚೆಕ್ ಪೋಸ್ಟ್ ನಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡದ ಕೆಲಸಕ್ಕೆ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಯುಗಾದಿ ಮಹೋತ್ಸವಗಳಲ್ಲಿ ಶ್ರೀ ಸ್ವಾಮಿಯವರ ಸ್ಪರ್ಶ ದರ್ಶನ ಸ್ಥಗಿತ

ಬೆಳಗಾವಿ: ಶ್ರೀಶೈಲ ಮಹಾ ಕ್ಷೇತ್ರದಲ್ಲಿ ಮಾ. 19, 2023 ರಿಂದ ಮಾ.23, 2023 ರ ವರೆಗೆ ಯುಗಾದಿ ಮಹೋತ್ಸವಗಳು ನಡೆಯುತ್ತವೆ.

ಐದು ದಿವಸಗಳ ಪರ್ಯಂತ ನಡೆಯುವ ಈ ಉತ್ಸವಗಳ ಸಂದರ್ಭದಲ್ಲಿ 16 ಲಕ್ಷಕ್ಕೂ ಹೆಚ್ಚಿನ ಭಕ್ತರು ಶ್ರೀ ಕ್ಷೇತ್ರವನ್ನು ಸಂದರ್ಶಿಸಬಹುದಾಗಿದೆ. ಉತ್ಸವಗಳ ಪ್ರಾರಂಭಕ್ಕಿಂತಲೂ ಒಂದು ವಾರು ಮುಂಚಿನಿಂದ ಅಂದರೆ ಮಾರ್ಚ.12 2023 ರಿಂದ ಅಧಿಕ ಸಂಖ್ಯೆಯಲ್ಲಿ ಭಕ್ತರು ಈ ಕ್ಷೇತ್ರವನ್ನು ಸಂದರ್ಶಿಸುತ್ತಾರೆ.

ಈ ಉತ್ಸವಗಳ ಅಂಗವಾಗಿ ಕರ್ನಾಟಕ ರಾಜ್ಯದಿಂದ ಮುಖ್ಯವಾಗಿ ಉತ್ತರ ಕರ್ನಾಟಕ ಮತ್ತು ಮಹಾರಾಷ್ಟ್ರದಲ್ಲಿರುವ ಸೋಲಾಪುರ, ಸಾಂಗ್ಲಿ ಮುಂತಾದ ಪ್ರಾಂತ್ಯಗಳಿಂದ ಭಕ್ತರು ಬರುತ್ತಾರೆ, ಇವರಲ್ಲಿ ಅನೇಕ ಭಕ್ತರು ಪಾದಯಾತ್ರೆಯಲ್ಲಿ ಶ್ರೀ ಶೈಲಕ್ಕೆ ಬರುವುದು ವಿಶೇಷ.

ಆದರೆ ಭಕ್ತರಿಗೆಲ್ಲರಿಗೂ ಸೌಕರ್ಯಯುತ ದರ್ಶನವನ್ನು ಕಲ್ಪಿಸಬೇಕೆಂದು ಯುಗಾದಿ ಮಹೋತ್ಸವಗಳಲ್ಲಿ ಅಂದರೆ ಮಾ. 19. 2023 ರಿಂದ ಮಾ. 23. 2023 ರ ವರೆಗೆ ಭಕ್ತರೆಲ್ಲರಿಗೂ ಸ್ವಾಮಿಯವರ ಅಲಂಕಾರ ದರ್ಶನ ಮಾತ್ರ ಕಲ್ಪಿಸಲಾಗುತ್ತದೆ. ಉತ್ಸವ ದಿನಗಳಲ್ಲಿ ಸ್ವಾಮಿಯವರ ಸ್ಪರ್ಶ ದರ್ಶನಕ್ಕೆ ಅವಕಾಶ ಇರುವುದಿಲ್ಲ.

ಭಕ್ತರಲ್ಲರಿಗೂ ಸ್ಪರ್ಶದರ್ಶನ ಕಲ್ಪಿಸಬಹುದಾದರೆ ದಿನಕ್ಕೆ ಗರಿಷ್ಠ 15 ಸಾವಿರ ಭಕ್ತರಿಗೆ ಮಾತ್ರ ದರ್ಶನ ಭಾಗ್ಯ ಸಿಗಬಹುದು, ಆದರೆ ಉತ್ಸವ ದಿನಗಳಲ್ಲಿ ದಿನಕ್ಕೆ ಸುಮಾರು 60, ಸಾವಿರ ರಿಂದ 70, ವರೆಗೆ ಭಕ್ತರು ಸಂದರ್ಶಿಸುವ ಸಂಭವವಿದೆ.

ಭಕ್ತರೆಲ್ಲರಿಗೂ ಸೌಕರ್ಯಯುತ ದರ್ಶನ ಕಲ್ಪಿಸಲಾಗುತ್ತದೆ. ಆದ್ದ–ರಿಂದ ಈ ದಿನಗಳಲ್ಲಿ ಕೇವಲ ಶ್ರೀ ಸ್ವಾಮಿಯವರ ಅಲಂಕಾರ ದರ್ಶನಕ್ಕೆ ಹಾಗೂ ಲಘುದರ್ಶನಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಉತ್ಸವ ಅವಧಿಯ ಹತ್ತು ದಿನಗಳ ಮುಂಚೆ ಅಂದರೆ ಮಾ. 09. 2023 ರಿಂದ ಮಾ. 18. 2023 ರ ವರೆಗೆ ನಿರ್ದಿಷ್ಟ ನಾಲ್ಕು ಹಂತಗಳಲ್ಲಿ ಭಕ್ತರಿಗೆ ಶ್ರೀ ಸ್ವಾಮಿಯವರ ಸ್ಪರ್ಶ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ.

ಈ ಸ್ಪರ್ಶ ದರ್ಶನದ ಟಿಕೆಟ್ ಬೆಲೆ 500 ರೂ ನಿಗದಿಪಡಿಸಲಾಗಿದೆ ಒಂದು ಹಂತದಲ್ಲಿ 1500 ಟಿಕೆಟ್ ಗಳನ್ನು ಮಾತ್ರ ವಿತರಿಸಲಾಗುವುದು ಭಕ್ತಾದಿಗಳು ಈ ಬದಲಾವಣೆ ಗಮನಿಸಬೇಕು.

ಈ ವಿಷಯದ ಮೇಲೆ ಈಗಾಗಲೇ ಬಾಗಲಕೋಟೆ ಜಿಲ್ಲೆಯ ರಬ್ಬಲಿಯಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರದ ಹಲವು ಭಕ್ತ ಸಂಘಗಳು, ಪಾದಯಾತ್ರೆ ವೃಂದಗಳು ಸ್ವಚ್ಛಂದ ಸೇವಾ ಸಂಸ್ಥೆಗಳ ಪ್ರತಿನಿಧಿಗಳಿಂದ ದೇವಸ್ಥಾನ ಸಮನ್ವಯ ಸಮಾವೇಶ ಏರ್ಪಾಡು ಮಾಡಲಾಗಿದೆ.

ಈ ಸಮಾವೇಶದಲ್ಲಿ ಭಕ್ತ ವೃಂದ ಪ್ರವಿಧಿಗಳಿಗೆ ಉತ್ಸವ ದಿನಗಳಲ್ಲಿ ಭಕ್ತರೆಲ್ಲರಿಗೂ ದರ್ಶನದ ಅವಕಾಶ ಕಲ್ಪಿಸಲು, ದರ್ಶನ ಸಂಬಂಧ ಏರ್ಪಾಡುಗಳ ಬಗ್ಗೆ ವಿವರಿಸಲಾಗಿದೆ.

ಶ್ರೀಶೈಲ ಜಗದ್ಗುರು ಪೀಠಾಧಿಪತಿಗಳಾದ ಶ್ರೀ ಚನ್ನ ಸಿದ್ದರಾಮ ಶಿವಾಚಾರ್ಯ ಸ್ವಾಮೀಜಿಗಳು ಕಂಡ ಈ ಸಮಾವೇಶಕ್ಕೆ ಆಗಮಿಸಿ ತಮ್ಮ ಅನುಗ್ರಹ ಸಂಭಾಷಣೆ ನೀಡಿದ್ದಾರೆ.

ಆದ್ದರಿಂದ ಭಕ್ತರೆಲ್ಲರೂ ಈ ವಿಷಯವನ್ನು ಗಮನಿಸಿ ದೇವಸ್ಥಾನಕ್ಕೆ ಸಹಕರಿಸಬೇಕು.

ಈ ಸಂದರ್ಭವಾಗಿ ಭಕ್ತರೆಲ್ಲರಿಗೂ ಶ್ರೀ ಭ್ರಮರಾಂಬೆ ಮತ್ತು ಶ್ರೀಮಲ್ಲಿಕಾರ್ಜುನ ಸ್ವಾಮಿಯವರ ಆಶೀರ್ವಾದಗಳು ಲಭಿಸಬೇಕೆಂದು ಆಕಾಂಕ್ಷಿಸುತ್ತೇವೆ. ಸಶ್ರೀ ಸ್ವಾಮಿ ಅಮ್ಮನವರ ಸೇವೆಯಲ್ಲಿ ಡಿಪ್ಯೂಟಿ ಕಲೆಕ್ಟರ್ ಮತ್ತು ಕಾರ್ಯನಿರ್ವಹಣಾಧಿಕಾರಿಗಳಾದ ಸಂ. ಎಸ್. ಲವನ್ನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ 45 ದಿನಗಳ ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು :**

18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, BPL ಕಾರ್ಡ ಹೊಂದಿರಬೇಕು, ದಾಖಲೆಗಳು. BPL ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್. 4 ಭಾವಚಿತ್ರಗಳನ್ನು ಲಗತ್ತಿಸಬೇಕು.

ತರಬೇತಿ ಅವಧಿ ಮಾರ್ಚ. 23, 2023 ರಿಂದ ಪ್ರಾರಂಭವಾಗಲಿದೆ.

ಅರ್ಜ ಸಲ್ಲಿಸುವ ಕೊನೆಯ ದಿನಾಂಕ ಮಾರ್ಚ. 20 2023, ರೊಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಕೆಳಗೆ ನೀಡಿದ https://docs.google.com/forms/d/e/1FAIpQLSdZEI9npV5dVuQbdqFXUGc6yt__7daI02YrhyvRSLywjlFfKA/viewform?vc=0&c=0&w=1&flr=0 ಗೂಗಲ್ ಫಾರ್ಮ ಲಿಂಕನಲ್ಲಿ ಮಾಹಿತಿ ಸಲ್ಲಿಸಬಹುದಾಗಿದೆ.

ಸಂಸ್ಥೆಯ ವಿಳಾಸ ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ, ಬೆಳಗಾವಿ – 590015 ಭೇಟಿ ನಿಡಬಹುದು.

45 ದಿನಗಳಕಾಲ ತರಬೇತಿ ಅವಧಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ,

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2440644, 8296792166, 9845750043, 8050406866, 8867388906, 9449860564 ಗೆ 9.30 ರಿಂದ ಸಾಯಂಕಾಲ 6. ವರೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆ ಕಾಮಗಾರಿಗಳ ಪರಿವೀಕ್ಷಣೆ

ಬೆಳಗಾವಿ: NRRDA ಯಿಂದ ನಿಯೋಜಿರಾದ ಕೇಂದ್ರಗುಣ ನಿಯಂತ್ರಣ ಪರಿವೀಕ್ಷಕರು (NQM) ಹೋತ್ವಾನಿ ರಮೇಶ ನಾನಕ ರಾಮ ಅವರು ಬೆಳಗಾವಿ ಜಿಲ್ಲೆಯ ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳ ಪರಿವಿಕ್ಷಣೆಗಾಗಿ ಮಾರ್ಚ್ 23 ರಿಂದ 27 ರವರೆಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ಪ್ಯಾಕೇಜ್ ನಂ– ಕೆ.ಎನ್. 04–103 ಎಂ.ಆರ್.ಎಲ್.21 ಹಿಡಲಗಾ ದಿಂದ ಅಂಬೇವಾಡೀ ಖಡೀ ಮಶೀನ ದಿಂದ ಕಾಡೋಲಿ ವರೆಗೆ, ಪ್ಯಾಕೇಜ್ ನಂ– ಕೆ.ಎನ್. 04–111, ಎಂ.ಆರ್.ಎಲ್.14 ಕನಗಲಾ ದಿಂದ ಸೋಲಾಪೂರ ವ್ಹಾಯಾ ಹೊನ್ನಿಹಾಳ ವರೆಗೆ ಕೆ .ಎನ.04 117 ಎಂ. ಆರ್. ಎಲ್ 25 ಚೀಲಭಾವಿ ದಿಂದ ಅರಳಿಕಟ್ಟಿ ಎಂ. ಡಿ. ಆರ್. ವರೆಗೆ ಪರಿವೀಕ್ಷಣೆ ಕೈಗೊಳ್ಳಲಿದ್ದಾರೆ.

ಅದೇ ರೀತಿಯಲ್ಲಿ ಪ್ಯಾಕೇಜ್ ನಂ– ಕೆ.ಎನ್. 04–142 ಎಂ.ಆರ್.ಎಲ್ 35– ಮುಚ್ಚಂಡಿ ಬುದ್ಯಾನೂರ ದಿಂದ ಕರವಿ ವರೆಗೆ ಕಾಮಗಾರಿಗಳನ್ನು ಎಂದು ಬೆಳಗಾವಿಯ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವನ ಬದುಕು ದೀಪದಂತೆ ಪರಿಶುದ್ಧವಾಗಿರಲಿ: ಶ್ರೀ ರಂಭಾಪುರಿ ಜಗದ್ಗುರು

ಬೇಲೂರು : ಪರಿಶುದ್ಧ ಜೀವನಕ್ಕೆ ಸಂಸ್ಕಾರ ಮುಖ್ಯ. ಸದ್ವಿಚಾರ ಸದಾಚಾರಗಳಿಂದ ಬದುಕು ಸಮೃದ್ಧ. ದೀಪದ ಬೆಳಕು ಎಲ್ಲಿ ಬಿದ್ದರೂ ಮಲಿನವಾಗುವುದಿಲ್ಲ. ಅದರಂತೆ ಮಾನವನ ಬದುಕು ದೀಪದಂತೆ ಪರಿಶುದ್ಧವಾಗಿರಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ತಾಲೂಕಿನ ಅಂಕಿಹಳ್ಳಿ ಗ್ರಾಮದಲ್ಲಿ ಶ್ರೀ ಬಸವೇಶ್ವರ ಸ್ವಾಮಿ ಪುನರ್ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ 'ಧರ್ಮ ಸಂಗಮ' ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬೆಟ್ಟ ಎಂದಿಗೂ ನಮ್ಮ ಮುಂದೆ ಬಾಗುವುದಿಲ್ಲ. ಆದರೆ ಕಷ್ಟಪಟ್ಟು ಬೆಟ್ಟ ಏರಿದ ಮೇಲೆ ಅದು ಪಾದದ ಕೆಳಗೆ ಇರುತ್ತದೆ. ಪ್ರಯತ್ನ ಮತ್ತು ಸಾಧನೆಯಿಲ್ಲದೇ ಶ್ರೇಯಸ್ಸು ಸಿಗುವುದಿಲ್ಲ. ಎಲ್ಲಿ ನಿಜವಾದ ಭಕ್ತಿ ಇದೆಯೋ ಅಲ್ಲಿ ದೇವರಿದ್ದಾನೆ. ಎಲ್ಲಿ ನಂಬಿಗೆ ಇದೆಯೋ ಅಲ್ಲಿ ಸಾರ್ಥಕ ಜೀವನವಿದೆ. ಎಲ್ಲಿ ಸಂತೋಷ ಇದೆಯೋ ಅಲ್ಲಿ ಸ್ವರ್ಗವಿದೆ. ದೇವರು ಧರ್ಮ ಮತ್ತು ಗುರುವಿನಲ್ಲಿ ಅಚಲ ನಂಬಿಕೆ ವಿಶ್ವಾಸಗಳನ್ನು ಕಳೆದುಕೊಳ್ಳಬಾರದು. ಬದುಕಿನಲ್ಲಿ ಯಶಸ್ಸು ಪಡೆಯಬೇಕಾದರೆ ಶಿಸ್ತು, ಶಾಂತಿ, ಸಹನೆ, ಸದ್ವಿದ್ಯೆ, ಪರಿಶ್ರಮ ಮತ್ತು ಪರೋಪಕಾರ ಗುಣಗಳನ್ನು ಅಳವಡಿಸಿಕೊಳ್ಳಬೇಕು. ವೀರಶೈವ ಧರ್ಮದಲ್ಲಿ ಅತ್ಯಮೂಲ್ಯವಾದ ವಿಚಾರ ಧಾರೆಗಳನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ. ಅಂಕಿಹಳ್ಳಿ ಶ್ರೀ ಬಸವೇಶ್ವರ ದೇವಸ್ಥಾನ ಪುನರ್ ನಿರ್ಮಾಣ ಮಾಡಿ ಇಂದು ಪ್ರತಿಷ್ಠಾಪನೆಗೊಳ್ಳುತ್ತಿರುವುದು ತಮ್ಮೆಲ್ಲರ ದೈವ ಭಕ್ತಿಗೆ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಸಮಾರಂಭದ ಉದ್ಘಾಟನೆಯನ್ನು ಬಿಜೆಪಿ ಧುರೀಣ ಸಿದ್ಧೇಶ ನಾಗೇಂದ್ರ ನೆರವೇರಿಸಿ ಮಾತನಾಡಿದರು. ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು, ದೊಡ್ಡಗುಣಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಯಸಳೂರು ಚನ್ನಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಬೇರುಗ–'ಂಡಿ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು, ಸಂಕಲಾಪುರ ಮಠದ ಧರ್ಮರಾಜ ಸ್ವಾಮಿಗಳು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು. ಶಾಸಕ ಕೆ.ಎಸ್.ಲಿಂಗೇಶ ಅವರು ಮಾತನಾಡಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಧರ್ಮದ ಅರಿವು ಆಚರಣೆ ಮುಖ್ಯವೆಂದರು. ಚಟ್ನಳ್ಳಿ ಮಹೇಶ ಉಪನ್ಯಾಸವನ್ನಿತ್ತರು. ಬಿಜೆಪಿ ಮಾಜಿ ಅಧ್ಯಕ್ಷ ಕೊರಟಗೆರೆ ಪ್ರಕಾಶ ಅಧ್ಯಕ್ಷತೆ ವಹಿಸಿದ್ದರು.

ಶಿವಗಂಗಾ ಗ್ರ್ಯಾನೈಟ್ಸನ ರಾಜಶೇಖರ್, ಬಿಜೆಪಿ ಮುಖಂಡ ಕೆಂಚಾಂಭ ಸಂತೋಷ್, ಮಾಜಿ ಜಿ.ಪಂ.ಸದಸ್ಯ ನಟರಾಜು ಬಿ.ಐ. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಸಿಂಗರವಳ್ಳಿ ಕಾಫಿ ಬೆಳೆಗಾರ ಪರಮಶಿವಪ್ಪನವರು ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಎ.ಪಿ. ಪುಟ್ಟಸ್ವಾಮಿ ಸ್ವಾಗತಿಸಿದರು. ಬಿಕ್ಕೋಡು ಶಾಲಾ ಶಿಕ್ಷಕಿ ಹೇಮಲತಾ ನಿರೂಪಿಸಿ ವಂದನಾರ್ಪಣೆ ಸಲ್ಲಿಸಿದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳನ್ನು ಭವ್ಯ ಸಾರೋಟ ಮೆರವಣಿಗೆ ಮೂಲಕ ಬರಮಾಡಿಕೊಂಡರು. ಡೊಳ್ಳು, ವೀರಗಾಸೆ, ವಾದ್ಯ ಕಲಾತಂಡ ಹಾಗೂ ಕುಂಭ ಹೊತ್ತ ಆರತಿ ಹಿಡಿದ ಸುಮಂಗಲೆಯರು ಉತ್ಸವದಲಿ ಪಾಲ್ಗೊಂಡು ಮೆರಗು ತಂದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

ಧಾರ್ಮಿಕ ಪೂಜಾ ಕೈಂಕರ್ಯಗಳ ನೇತೃತ್ವವನ್ನು ಬೆಂಗಳೂರಿನ ಚಂದ್ರಶೇಖರ ಶಾಸ್ತ್ರಿಗಳು, ಅಂಕಿಹಳ್ಳಿ ತೀರ್ಥೇಶ ಶಾಸ್ತ್ರಿಗಳು, ವಿಜಯಕುಮಾರ ಶಾಸ್ತ್ರಿಗಳು ವಹಿಸಿದ್ದರು.

## ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಮಾರಿಹಾಳ ಶ್ರೀಖಾಸ್ಗತ ಮಠಕ್ಕೆ ಬೆಟ್ಟಿ



ತಾಳಿಕೋಟೆ: ವಿಜಯಪೂರ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಅವರು ಪಟ್ಟಣದ ಶ್ರೀ ಖಾಸ್ಗತೇಶ್ವರ ಮಠಕ್ಕೆ ಬೆಟ್ಟಿ ನೀಡಿ ಶ್ರೀ ಖಾಸ್ಗತರ ಹಾಗೂ ಶ್ರೀ ವಿರಕ್ತಶ್ರೀಗಳ ಗದ್ದುಗೆಗೆ ಮಹಾಪೂಜೆ ಸಲ್ಲಿಸಿದರಲ್ಲದೇ ಶ್ರೀಮಠದ ಶ್ರೀ ಸಿದ್ದಲಿಂಗಶ್ರೀಗಳಿಂದ ಆಶಿರ್ವಾದ ಪಡೆದುಕೊಂಡರು.

ಶ್ರೀಮಠಕ್ಕೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಅವರು ಬೆಟ್ಟಿ ನೀಡಿದ ಸಂದರ್ಬದಲ್ಲಿ ಶ್ರೀಮಠದ ಶ್ರೀ ಸಿದ್ದಲಿಂಗ ದೇವರು ಸನ್ಮಾನಿಸಿ ಗೌರವಿಸಿದರು.

ಈ ಸಮಯದಲ್ಲಿ ಶ್ರೀಮಠದ ಉಸ್ತುವಾರಿ ವೇ.ಮುರುಘೇಶ ವಿರಕ್ತಮಠ, ಪಿ.ಎಸ್.ಆಯ್.ಸುರೇಶ ಮಂಟೂರ, ಗಿರೀಶ ಚಲವಾದಿ, ವೀರಣ್ಣ ಅಜ್ಜಣ್ಣನವರ, ಯಲ್ಲಪ್ಪ ಹದಗಲ್ಲ ಹಾಗೂ ವಿಶ್ವನಾಥ ಪಾಟೀಲ, ರಾಮು ಗುತ್ತಿಹಾಳ, ಮೊದಲಾದವರು ಇದ್ದರು.

## ಏ.5 ರಂದು ಬಸವ ಜಯಂತಿ ಅಂಗವಾಗಿ ಪ್ರಬಂಧ ಸ್ಪರ್ಧೆ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯುವಿಶ್ವಗುರು ಬಸವಣ್ಣನವರ ಜಯಂತ್ಯೋತ್ಸವ ಆಚರಣೆ ನಿಮಿತ್ತ ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಮತ್ತುಎಲ್ಲ ವಯೋಮಿತ ಹಿರಿಯ ನಾಗರಿಕರಿಗೆಐದು ವಿಭಾಗಗಳಲ್ಲಿ ಪ್ರಬಂಧ ಸ್ಪರ್ಧೆಯನ್ನು5 ಎಪ್ರಿಲ್ 2023 ರಂದು ಮುಂಜಾನೆ 10.30 ಗಂಟೆಗೆಕೆಎಲ್‌ಇ ಸಂಸ್ಥೆಯ ಬೆಳಗಾವಿಯ ಜಿ.ಎ. ಪ್ರೌಢಶಾಲೆಯಲ್ಲಿ ಆಯೋಜಿಸಿದೆ.

ಪ್ರಾಥಮಿಕ ವಿಭಾಗದಲ್ಲಿ 'ಬಸವಣ್ಣನವರಬಾಲ್ಯಜೀವನ',ಮಾಧ್ಯಮಿಕ ವಿಭಾಗಕ್ಕೆ 'ಕಲ್ಯಾಣ ಪಟ್ಟಣದಅನುಭವ ಮಂಟಪ ಮತ್ತು ಮಹಾಮನೆ',ಪದವಿಪೂರ್ವ ವಿಭಾಗಕ್ಕೆ 'ಮಹಾತ್ಮ ಬಸವಣ್ಣನವರ ವೈಚಾರಿಕತೆ',ಪದವಿ ಹಾಗೂ ಸ್ನಾತಕೋತ್ತರ ವಿಭಾಗದಲ್ಲಿ 'ಕಲ್ಯಾಣಕ್ರಾಂತಿಯ ಪ್ರಾಮುಖ್ಯತೆ', ಹಾಗೂಎಲ್ಲ ವಯೋಮಾನದವರಿಗೆ 'ಯುಗದಉತ್ಸಾಹ ಬಸವಣ್ಣ' ವಿಭಾಗವಾರು ವಿಷಯಗಳನ್ನು ನೀಡಲಾಗಿದೆ. ಸ್ಪರ್ಧಾ ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ಬಸವ ಜಯಂತಿಯಂದು ವಿತರಿಸಲಾಗುವುದು.

ಆಸಕ್ತ ಸ್ಪರ್ಧಾಳುಗಳು ದಿನಾಂಕ 4 ಎಪ್ರಿಲ್ 2023ರ ಒಳಗಾಗಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ, ಲಿಂಗಾಯತ ಭವನದಲ್ಲಿ ಹೆಸರನ್ನು ನೋಂದಾಯಿಸಬಹುದುಅ ಥವಾಕಾರ್ಯಾಲಯದಪ್ರವೀಣತೆವರಿಮೊ.ನಂ. 9164345208 ಇವರನ್ನು ಸಂಪರ್ಕಿಸಬೇಕಾಗಿ ಮಹಾಸಭೆಯಜಿಲ್ಲಾಘಟಕದಅಧ್ಯಕ್ಷೆ ಶ್ರೀಮತಿ ರತ್ನಪ್ರಭಾ ಬೆಲ್ಲದಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರೀಯ ಪಕ್ಷಗಳಿಂದ ರಾಜ್ಯದ ಅಭಿವೃದ್ಧಿ ಅಸಾಧ್ಯ: ಮಲ್ಲಿಕಾರ್ಜುನ ಗುಂಜಿಗಾಂವೆ

ಮೋಳೆ: ರಾಷ್ಟ್ರೀಯ ಪಕ್ಷಗಳಿಂದ ರಾಜ್ಯದ ಅಭಿವೃದ್ಧಿ ಅಸಾಧ್ಯ. ಕಾರಣ ಮುಂಬರುವ ಚುನಾವಣೆಗಳಲ್ಲಿ ಪ್ರಾದೇಶಿಕ ಪಕ್ಷವಾದ ಜೆಡಿಎಸ್ ಗೆಲುವಿಗಾಗಿ ತಾಲೂಕಾ ಮಟ್ಟದ ಪದಾಧಿಕಾರಿಗಳು ಹಗಲಿರುಳು ಶ್ರಮಿಸುವಂತೆ ಚಿಕ್ಕೋಡಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಹಾಗೂ ಕಾಗವಾಡ ತಾಲೂಕಾ ಜೆಡಿಎಸ್ ಪಕ್ಷದ ಬ್ಲಾಕ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಗುಂಜಿಗಾಂವಿ ಕರೆ ನೀಡಿದರು.



ಅವರು ಮಂಗಳವಾರ ದಿ. 21 ರಂದು ಶೇಡಬಾಳ ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕಾ ಪದಾಧಿಕಾರಿಗಳ ನೇಮಕ ಪತ್ರಗಳನ್ನು ಹಾಗೂ ಗ್ರಾಮಗಳ ಮನೆ ಮನೆಗೆ ಪಂಚರತ್ನ ಯೋಜನೆಯ ಧ್ಯೇಯೋದ್ದೇಶಗಳನ್ನು ಸಾರ್ವಜನಿಕರಿಗೆ ತಿಳಿ ಹೇಳುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ಅವರು ಮುಂದೆ ಮಾತನಾಡುತ್ತಾ ಕರ್ನಾಟಕದ ಸಮಗ್ರ ಅಭಿವೃದ್ಧಿ ಆಗಬೇಕಾದರೆ ಹಾಗೂ ನಮ್ಮ ಭಾಷೆ, ನಮ್ಮ ಸಂಸ್ಕೃತಿಯನ್ನು ಕಾಪಾಡಿಕೊಂಡು ಹೋಗಬೇಕಾದರೆ ಜೆಡಿಎಸ್ ಪಕ್ಷವನ್ನು ಪ್ರತಿಯೊಬ್ಬರು ಬೆಂಬಲಿಸುವುದು ಅತ್ಯವಶ್ಯವಾಗಿದೆ ಎಂದು ಪದಾಧಿಕಾರಿಗಳು ಮನೆ ಮನೆಗೆ ತೆರಳಿ ಸಾರ್ವಜನಿಕರಿಗೆ ಮನವರಿಕೆ ಮಾಡಿ ಕೊಡುವಂತೆ ಕರೆ ನೀಡಿದರು.

ಕಾಗವಾಡ ತಾಲೂಕಾ ಎಸ್.ಸಿ. ಘಟಕದ ಅಧ್ಯಕ್ಷ ರಮೇಶ ಭಿರಡಿಕರ ಮಾತನಾಡಿ ಎಸ್.ಸಿ. ಮೀಸಲಾತಿಯನ್ನು 15 ರಿಂದ 18 ರವರೆಗೆ ಹೆಚ್ಚಳಕ್ಕಾಗಿ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರು ನಾಗಮೋಹನದಾಸ ಆಯೋಗವನ್ನು ರಚಿಸಿ ಅದರ ಫಲಶೃತಿಯಾಗಿ ಇಂದು ಎಸ್.ಸಿ. ಮೀಸಲಾತಿ ಹೆಚ್ಚಿಸಲಾಗಿದೆ.

ಅದರ ಶ್ರೇಯಸ್ಸನ್ನು ಇತರ ಪಕ್ಷಗಳು ಪಡೆದುಕೊಳ್ಳುತ್ತಿರುವುದು ಖೇಧಕರ ಸಂಗತಿಯಾಗಿದೆ ಎಂದು ಹೇಳಿದರು. ನಿಜವಾದ ಶ್ರೇಯಸ್ಸು ಜೆಡಿಎಸ್ ಪಕ್ಷಕ್ಕೆ ಸಲ್ಲುತ್ತದೆ ಎಂದು ಹೇಳಿದರು.

ಕರ್ನಾಟಕ ರಾಜ್ಯದಲ್ಲಿ ಎಸ್.ಸಿ., ಎಸ್.ಟಿ. ಜನರ ಉದ್ಧಾರವಾಗಬೇಕಾದರೆ ಜೆ.ಡಿ.ಎಸ್. ಪಕ್ಷದಿಂದ ಮಾತ್ರ ಸಾಧ್ಯವೆಂದು ಹೇಳಿದರು.

ಇದೇ ಸಮಯದಲ್ಲಿ ಎಸ್.ಸಿ., ಎಸ್.ಟಿ. ಘಟಕದ ಜಿಲ್ಲಾಧ್ಯಕ್ಷರಾದ ಕುಮಾರ ಕಾಂಬಳೆ ನೂತನವಾಗಿ ನೇಮಕಗೊಂಡ ಪದಾಧಿಕಾರಿಗಳಿಗೆ ನೇಮಕ ಪತ್ರಗಳನ್ನು ನೀಡಿ ಗೌರವಿಸಿದರು.

ಈ ಸಮಯದಲ್ಲಿ ಚಿಕ್ಕೋಡಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಗುಂಜಿಗಾವಿ, ಎಸ್.ಸಿ. ಘಟಕದ ಅಧ್ಯಕ್ಷ ರಮೇಶ ಭಿರಡಿಕರ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಸಲಾವುದ್ದೀನ್ ಮುಲ್ಲಾ ಸೇರಿದಂತೆ ತಾಲೂಕಾ ಘಟಕದ ಎಲ್ಲ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಉಪಸ್ಥಿತರಿದ್ದರು.

## ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ



ಮೋಳೆ: ಎಷ್ಟೆ ಅಡೆತಡೆ ಬಂದರೂ ಕೂಡ ಮಾರ್ಚ 25 ರಂದೇ ಖಿಳೇಗಾಂವ ಬಸವೇಶ್ವರ ಏತನೀರಾವರಿ ಯೋಜನೆಯನ್ನು ಉದ್ಘಟಿಸಿ ಕಾಲುವೆಗಳಿಗೆ ನೀರನ್ನು ಹರಿಸಿಯೇ ತೀರುತ್ತನೆ ಎಂದು ಕಾಗವಾಡ ಶಾಸಕ ಶ್ರೀಮಂತ ಪಾಟೀಲ ಹೇಳಿದರು ಅವರು ತಾಂವಶಿ ಗ್ರಾಮದಲ್ಲಿ ಜಲಜೀವನ್ ಮಿಶನ್ ಯೋಜನೆಗೆ ಹಾಗೂ ತಾಂವಶಿ ಗ್ರಾಮದಲ್ಲಿ ಜಲಜೀವನ್ ಮಿಶನ್ ಯೋಜನೆಗೆ ಹಾಗೂ ತಾಂವಶಿಯಿಂದ ಕಿರಣಗಿ ಯೋಜನೆಗೆ ಹಾಗೂ ತಾಂವಶಿಯಿಂದ ಕಿರಣಗಿ ಕ್ರಾಸ್ ವರೆಗಿನ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು.

ನಾನು ರಾಜಕೀಯ ಮಾಡಲು ಶಾಸಕನಾಗಿಲ್ಲ ಬಡವರ, ರೈತರ, ನಿರ್ಗತಿಕರ ಸೇವೆ ಮಾಡಲು ಬಂದವನು. ನಾನು ಉದ್ಯಮಿಯಾಗಿ ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಿ ನಾನು ಕ್ಷೇತ್ರದ ರೈತರಿಗೆ ನೀರಾವರಿ ಒದಗಿಸುವ ಉದ್ದೇಶದಿಂದ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯನ್ನು ಅತೀ ಶೀಘ್ರದಲ್ಲಿಯೇ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪ್ರಯತ್ನ ನಡೆಸಿರುವೆ ಎಂದ ಅವರು ಈ ಯೋಜನೆಯ ಅನುಷ್ಠಾನಕ್ಕೆ ಸಾಕಷ್ಟು ಅಡೆತಡೆಗಳು ಬರುತ್ತಿವೆ ಆದರೂ ಕೂಡ ಇದೇ ಮಾರ್ಚ 25 ರಂದು ಸಾಯಂಕಾಲ 5 ಗಂಟೆಗೆ ಕಾಲುವೆಗಳಿಗೆ ನೀರು ಹರಿಸಿ ಯೋಜನೆಯನ್ನು ಉದ್ಘಾಟಿಸಲಾಗುವುದು ಎಂದರು.

ಕಾಗವಾಡ ಮತಕ್ಷೇತ್ರದಲ್ಲಿ ನನ್ನ ಅಧಿಕಾರಾವಧಿಯಲ್ಲಿ 78 ಹೊಸ ಅಂಗನವಾಡಿ ಕೇಂದ್ರಗಳು ಮಂಜೂರಾಗಿವೆ ಇದು 224 ವಿಧಾನ ಸಭಾ ಕ್ಷೇತ್ರಗಳಲ್ಲಿ ದಾಖಲೆಯಾಗಿದೆ ಎಂದ ಅವರು ನನ್ನ ಅಭಿವೃದ್ಧಿ ಹಾಗೂ ಜನಪರ ಯೋಜನೆಗಳನ್ನು ಮೆಚ್ಚಿ ಎಲ್ಲ ಸಮುದಾಯದ ಮತದಾರ ಬಾಂದವರೂ ನನ್ನ ಬೆನ್ನಿಗೆ ನಿಂತಿದ್ದಾರೆ ಎಂದರು.

ನನ್ನ 5 ವರ್ಷಗಳ ಅಧಿಕಾರಾವಧಿಯಲ್ಲಿ ಒಂದು ವರ್ಷ ಮಾಹಾಪೂರ ಹಾಗೀ ಇನ್ನೆರಡು ವರ್ಷ ಕರೋನಾ ರೋಗದ ಪರಿಣಾಮ ಯಾವುದೇ ಅಭಿವೃದ್ಧಿ ಪರ ಯೋಜನೆ ಅನುಷ್ಠಾನಗೊಳಿಸಲು ಸಾಧ್ಯವಾಗಿರಲಿಲ್ಲ ಆದರೂ ಕೂಡ ನಾನು ಇನ್ನುಳಿದ 2 ವರ್ಷಗಳಲ್ಲಿ 3000ಕೋಟಿಯಷ್ಟು ಅನುದಾನ ತಂದಿರುವೆ ಎಂದರು.

ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ನಾನಾಸಾಹೇಬ ಅವತಾಡೆ, ವ್ಹಿ.ಕೆ.ಕುಲಕರ್ಣಿ, ಶಿವು ಮಾಲಗಾಂವಿ, ಅಕ್ಷಯ ಕುಲಕರ್ಣಿ, ಬಾಳು ಹಜಾರೆ, ನಿಕಿತ ಪಾಟೀಲ, ಅರ್ಜುನ ನಾಯಿಕ, ಗಣೇಶ ಕಾಂಬಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿಶ್ವರಂಗಭೂಮಿ ದಿನಾಚರಣೆ: ಮೂರು ದಿನಗಳ ನಾಟಕೋತ್ಸವ

ಬೆಳಗಾವಿ: ಬೆಳಗಾವಿ ರಂಗಸಂಪದವು ಮಾರ್ಚ 27 ರಂದು ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ದಿ:25–03–2023 ರಿಂದ 27–03–2023 ರ ವರೆಗೆ ನಗರದ ಲೋಕಮಾನ್ಯ ರಂಗಮಂದಿರದಲ್ಲಿ ಮೂರು ದಿನಗಳ ಕಾಲ ದಿ.ಶಿವಕುಮಾರ ಸಂಬರಗಿಮಠ ನಾಟಕೋತ್ಸವವನ್ನು ಭಾರತೀಯ ಜೀವ ವಿಮಾ ನಿಗಮ ಬೆಳಗಾವಿ ವಿಭಾಗ ಇವರ ಪ್ರಾಯೋಜನೆಯಲ್ಲಿ ಹಮ್ಮಿಕೊಂಡಿದೆ ಎಂದು ರಂಗಸಂಪದ ಅಧ್ಯಕ್ಷರಾದ ಶ್ರೀ.ಅರವಿಂದ ಕುಲಕರ್ಣಿ ತಿಳಿಸಿದರು.

ಅವರು ನಗರದ ಚನ್ನಮ್ಮ ವೃತ್ತದಲ್ಲಿರುವ ಕನ್ನಡ ಸಾಹಿತ್ಯಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತ ದಿನಾಂಕ:25–03–2023 ರಂದು ಲೇಖ–ಕರಾದ ಶ್ರೀಮತಿ ವಿನುತಾ ಹಂಚಿನಮನಿ, ಧಾರವಾಡ ರಂಗರೂಪ ಮತ್ತು ನಿರ್ದೇಶನ ಡಾ.ಅರವಿಂದ ಕುಲಕರ್ಣಿ ಅವರ "ಪಂಚಕನ್ಯ ಸ್ಮರೇ ನಿತ್ಯಂ" ನಾಟಕ ಮತ್ತು ದಿ:26–03–2023 ರಂದು ಶ್ರೀ.ರಾಜೇಂದ್ರ ಕಾರಂತ, ರಂಗರೂಪ ಮತ್ತು ನಿರ್ದೇಶನ ಡಾ.ಅರವಿಂದ ಕುಲಕರ್ಣಿ ಅವರ "ಮುದ್ದಣ್ಣನ ಪ್ರಮೋಷನ್ ಪ್ರಸಂಗ" ಸಾಮಾಜಿಕ ಹಾಸ್ಯ ನಾಟಕ ಹಾಗೂ ದಿನಾಂಕ:27–03–2023 ರಂದು ರಂಗರೂಪ/ವಿನ್ಯಾಸ/ನಿರ್ದೇಶನ ಶ್ರೀ.ರಾಜಗುರು ಹೊಸಕೋಟೆ ಅವರ ಫೂಲನದೇವಿ ಜೀವನ ಆಧಾರಿತ ನಾಟಕ "ಫೂಲನ ದೇವಿ" ನಾಟಕಗಳು ನಗರದ ಲೋಕಮಾನ್ಯ ರಂಗ ಮಂದಿರದಲ್ಲಿ ಮೂರು ದಿನಗಳ ಕಾಲ ಸಂಜೆ 6.00ಕ್ಕೆ ಪ್ರದರ್ಶನಗೊಳ್ಳಲಿವೆ ಎಂದರು.


ಪ್ರತಿ ವರ್ಷ ರಂಗಸಂಪದ ನೀಡುವ "ರಂಗಸಖ" ಪ್ರಶಸ್ತಿಯನ್ನು 2023ರ ಸಾಲಿಗೆ ರಂಗಕರ್ಮಿ ಧಾರವಾಡ ಅಭಿನಯ ಭಾರತಿಯ ಅಧ್ಯಕ್ಷರಾದ ಶ್ರೀ.ಅರವಿಂದ ಕುಲಕರ್ಣಿ ಅವರಿಗೆ ನೀಡಲಾಗುತ್ತಿದೆ. ಅಲ್ಲದೆ ಅಂ–ದು ಹಿರೀಯ ಕಲಾವಿದರಾದ ಶ್ರೀ.ರಮೇಶ ಅನಿಗಳ ಹಾಗೂ ಶ್ರೀ.ಗಂಗಾಧರ ಬೆನ್ನೂರು, ಇವರುಗಳಿಗೆ ಸನ್ಮಾನ ಮಾಡಲಾಗುವದು ಎಂದರು.

ಅಂದು ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಭಾರತೀಯ ಜೀವ ವಿಮಾ ನಿಗಮ, ಬೆಳಗಾವಿ ಹಿರಿಯ ವಿಭಾಗಾಧಿಕಾರಿಗಳಾದ ಶ್ರೀ.ಅಜೀತ ವಾರಕರಿ ಆಗಮಿಸಲಿದ್ದು, ಹಿರಿಯ ನ್ಯಾಯವಾದಿಗಳು ಹಾಗೂ ರಂಗಸಂಪದ ಪೋಷಕರಾದ ಶ್ರೀ.ಎಸ್.ಎಂ.ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ರಂಗಸಂಪದ ಗೌರವಾಧ್ಯಕ್ಷರಾದ ರಂಗಕರ್ಮಿ ಶ್ರೀಪತಿ ಮಂಜನಬೈಲು ಉಪಸ್ಥಿತರಿರುವರು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ರಂಗಸಂಪದ ಅಧ್ಯಕ್ಷರಾದ ಡಾ.ಅರವಿಂದ ಕುಲಕರ್ಣಿ, ಕಾರ್ಯದರ್ಶಿಗಳಾದ ಪ್ರಸಾದ ಕಾರಜೋಳ, ಉಪಾಧ್ಯಕ್ಷರಾದ ರಾಮಚಂದ್ರ ಕಟ್ಟಿ, ಗುರುನಾಥ ಕುಲಕರ್ಣಿ, ಕೋಶಧ್ಯಕ್ಷರಾದ ದಲೀಪ ಮಳಗಿ, ಸದಸ್ಯರಾದ ಅಶೋಕ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

# ಸತ್ಯ ಶುದ್ಧ ಕಾಯಕ ಮಾಡುತ್ತಾ ದೇವರನ್ನು ನಂಬಿ ಬದುಕುವವನೇ ನಿಜವಾದ ಭಕ್ತ

ಭಾಲ್ಕಿ: 65ನೇ ದಿನದ ಮನೆಗೊಂದು ಅನುಭವ ಮಂಟಪ ಕಾರ್ಯಕ್ರಮವು ಶ್ರೀಮತಿ ದೇವಕಿ ಬಸವರಾಜ ವಂಕೆ ಮಾಜಿ ಪುರಸಭೆ ಅಧ್ಯಕ್ಷರು ಆಸ್ಟುರೆ ಕಲ್ಯಾಣ ಮಂಟಪದ ಹತ್ತಿರ ಭಾಲ್ಕಿ ಅವರ ಮನೆಯಲ್ಲಿ ನಡೆಯಿತು.




ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪೂಜ್ಯ ಶ್ರೀ ಡಾ. ಬಸವಲಿಂಗ ಪಟ್ಟದೇವರು ವಹಿಸಿದ್ದರು. ಹಾಗೂ ಪೂಜ್ಯ ಶ್ರೀ ಗುರುಬಸವ ಪಟ್ಟದೇವರು ಹಿರೇಮಠ ಸಂಸ್ಥಾನ ಭಾಲ್ಕಿ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಬಸವರಾಜ ಮರೆ, ಶಂಭುಲಿಂಗ ಕಾಮಣ್ಣ ವೇದಿಕೆಯ ಮೇಲೆ ಉಪಸ್ಥಿತರಿದ್ದರು

ವಂಕೇ ಪರಿವಾರದವರು ಬಸವ ಗುರು ಪೂಜೆ ಸಲ್ಲಿಸಿದರು. ವಚನ ಗಾಯನ ಹಾಗೂ ಜ್ಯೋತಿ ಬೆಳಗುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಸವರಾಜ್ ಮರೆ ಬಸವ ಪ್ರಾರ್ಥನೆಯನ್ನು ನೆರವೇರಿಸಿದರು. ಶ್ರೀ ಶಂಭುಲಿಂಗ ಕಾಮಣ್ಣ ಭಾಲ್ಕಿ ಅವರು ಭಕ್ತ ಎನ್ನುವ ವಿಷಯದ ಕುರಿತು ತಮ್ಮ ಅನುಭವವನ್ನು ಹೇಳಿದರು. ಭಕ್ತ ಎಂದರೆ ಯಾರು? ಭಕ್ತ ಹೇಗಿರಬೇಕು? ಎಂಬುದರ ಕುರಿತು ಮಾತನಾಡಿದರು.

ಭಕ್ತನು ದೇವರಲ್ಲಿ ನಂಬಿಕೆ ಇಟ್ಟು ಕಾಯಕ ನಿಷ್ಠೆ ಪ್ರಾಮಾಣಿಕತೆಯಿಂದ ಜೀವನ ನಡೆಸಬೇಕು. ದೇವರು ಯಾರು? .

ದೇ – ದೇಹವಿಲ್ಲದವನು

ವ – ವರ್ಣವಿಲ್ಲದವನು

ರು – ರೂಪವಿಲ್ಲದವನು. ದೇವರು ನಿರಾಕಾರ ಸ್ವರೂಪ ಆತನು ನಮ್ಮ ಕಣ್ಣಿಗೆ ಕಾಣುವುದಿಲ್ಲ, ಆತನಿಗೆ ಬಣ್ಣ ಇಲ್ಲ, ಆತನಿಗೆ ರೂಪವಿಲ್ಲ. ನಿರ್ಗುಣ ನಿರಾಕಾರ ಸ್ವರೂಪನೆ ದೇವರು ಎಂದು ಬಸವಣ್ಣನವರು ಹೇಳಿರುವುದು. ಹಾಗಾದರೆ ನಿರಾಕಾರ ಸ್ವರೂಪವಾದ ದೇವರನ್ನು ನಾವು ಹೇಗೆ ಪೂಜಿಸಬೇಕು ಹೇಗೆ ಕಾಣಬೇಕು ಎಲ್ಲಿ ಕಾಣಬೇಕು ಎಂದು ಪ್ರಶ್ನಿಸಲು ಬಸವಣ್ಣ ಲಿಂಗ ಕೈಯಲ್ಲಿಟ್ಟರು. ಲಿಂಗದಲ್ಲಿ ಶಿವನನ್ನು ಕಾಣು ಎಂದು ಹೇಳಿದರು.

ಎರಡು ವಿಧದ ಜನರಿದ್ದಾರೆ ಒಬ್ಬ ನಾಸ್ತಿಕ ಮತ್ತು ಒಬ್ಬ ಭಕ್ತ. ಭಕ್ತ ದೇವರನ್ನು ತನ್ನ ಮನಮಂದಿರದಲ್ಲಿ, ತಾನು ಕಾಣುವ ಎಲ್ಲಾ ವಸ್ತುಗಳಲ್ಲಿ ನೋಡುವನು. ಹೇಗೆ ಎಂದರೆ ಒಂದು ದೋಣಿ ನಡೆಸಲು ಹೇಗೆ ಒಬ್ಬ ನಾವಿಕನ ಆವಶ್ಯಕತೆ ಇದೆಯೋ ಹಾಗೆಯೇ ಇಡೀ ಬ್ರಹ್ಮಾಂಡವನ್ನು ಸೂರ್ಯ ಚಂದ್ರ ನಕ್ಷತ್ರಾದಿಗಳನ್ನು ನಡೆಸುವವ ಒಬ್ಬ ಇರಬೇಕಲ್ಲ ಅವನೇ ದೇವರು ಯಾರು ದೇವರಲ್ಲಿ ನಂಬಿಕೆ ಇಡುವರೋ ಅವರೇ ನಿಜವಾದ ಭಕ್ತ. ಎಲ್ಲರಿಗೂ ನಮಸ್ಕರಿಸುವ, ಮೃದು ಮಾತಾಡುವವ, ಶಾಂತ, ಸತ್ಯವಂತ, ನಿಷ್ಕಪಟ, ನಿಷ್ಕಲ್ಮಶನಾದ, ತನ್ನ ಕಾಯಕವನ್ನು ಮಾಡುತ್ತಾ ದೇವರಲ್ಲಿ ನಂಬಿಕೆ ಇಡುವರೋ ಅವರೇ ನಿಜವಾದ ಭಕ್ತ.

ಕಾಶಿನಾಥ್ ಭುರೆ ಭಾಲ್ಕಿ ನಿರೂಪಿಸಿದರು. ಬಸವರಾಜ ಮರೆ, ಶಂಭುಲಿಂಗ ಕಾಮಣ್ಣ, ಶಾಂತಯ್ಯಾ ಸ್ವಾಮಿ ಅವರನ್ನು ಸನ್ಮಾನಿಸಿ ಗೌರವಿಸಿದರು. ಅನೇಕ ಶರಣ ಶರಣೆ–ಯರು ಭಕ್ತರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಶ್ರೀ ವಸಂತ ಹುಣಸನಾಳೆ, ಮಲ್ಲಮ್ಮ ನಾಗನಕೆರೆ, ಶರಣಪ್ಪಾ ರುಮ್ಮಾ, ಪಾರ್ವತಿ ಜಗನ್ನಾಥ ಧುಮ್ಮನಸುರೆ, ಸಂತೋಷ ಹಡಪದ, ಸೋಮನಾಥ ಹೋಸಾಳೆ, ಸುನಿತಾ ಮಮ್ಮ, ನಾಗಶೆಟ್ಟಿ ಲಂಜವಾಡೆ ಜಾನಪದ ಪರಿಷತ್ತು ಭಾಲ್ಕಿ ಯವರಿಂದ ವಂಕೆ ದಂಪತಿಗಳಿಗೆ ಸನ್ಮಾನ ಮಾಡಲಾಯಿತು. ಮಂಗಲ ಹಾಗೂ ಪ್ರಸಾದದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು ಎಂದು ಶ್ರೀ ಶಾಂತಯ್ಯ ಸ್ವಾಮಿ ತಿಳಿಸಿದರು.

# ಮಾಧ್ಯಮ ಪ್ರತಿನಿಧಿಗಳಿಗೆ ಪರಿಚಯ, ಜಾಗೃತಿ ಕಾರ್ಯಾಗಾರ

## ಮಾಧ್ಯಮಗಳು ಸಂಪರ್ಕ ಸೇತುವೆಯಂತೆ ಕಾರ್ಯನಿರ್ವಹಿಸಲಿ: ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ

ಬಳ್ಳಾರಿ : ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಆರೋಗ್ಯ ಸೇವೆಗಳು ಸೇರಿದಂತೆ ಎಲ್ಲಾ ಸೇವೆಗಳ ಮಾಹಿತಿಯನ್ನು ಜನರಿಗೆ ಸಕಾಲದಲ್ಲಿ ಅರಿವು ಮೂಡಿಸಲು ಮಾಧ್ಯಮಗಳು ಸರ್ಕಾರ ಮತ್ತು ಜನರ ನಡುವೆ ಸಂಪರ್ಕ ಸೇತುವೆಯಂತೆ ಕಾರ್ಯನಿರ್ವಹಿಸಲಿ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಹಿತಿ ಶಿಕ್ಷಣ ಸಂವಹನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಮಂಗಳವಾರ ಮಾಧ್ಯಮ ಪ್ರತಿನಿಧಿಗಳಿಗೆ ಹಮ್ಮಿಕೊಂಡಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಪರಿಚಯ ಮತ್ತು ಜಾಗೃತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಆರೋಗ್ಯ ಇಲಾಖೆಯಲ್ಲಿ ಲಭಿಸುವ ಎಲ್ಲಾ ಸೇವೆಗಳ ಮಾಹಿತಿಯು ಮಾಧ್ಯಮಗಳಿಂದ ಮಾತ್ರ ಜನರಿಗೆ ತಲುಪಲು ಸಾಧ್ಯ. ಮಾಧ್ಯಮ ಪ್ರತಿನಿಧಿಗಳಿಗೆ ಸೇವೆಗಳ ಮಾಹಿತಿಯು ತಲುಪಿದರೆ ಎಲ್ಲಾ ಜನ ಸಾಮಾನ್ಯರಿಗೆ ತಲುಪಿದಂತೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಮಾಜದಲ್ಲಿ ಆರೋಗ್ಯಕರ ವಾತಾವರಣವನ್ನು ನಿರ್ಮಿಸುವುದೇ ಆರೋಗ್ಯ ಇಲಾಖೆಯ ಕರ್ತವ್ಯವಾಗಿದ್ದು, ಸಮಾಜದಲ್ಲಿ ಆರೋಗ್ಯ ಸೇವೆಗಳ ಬಗ್ಗೆ ಇರುವ ಸಕಾರಾತ್ಮಕ ಮತ್ತು ನಕಾರಾತ್ಮಕ ಸಂದೇಶಗಳ ಬಗ್ಗೆ ಜನರಿಗೆ ಮಾಧ್ಯಮಗಳಿಂದ ಮಾತ್ರ ತಿಳಿಸಲು ಸಾಧ್ಯ ಎಂದರು.ಕೊರೋನ ಸಂದರ್ಭದಲ್ಲಿ ಮಾಧ್ಯಮದವರು ತಮ್ಮ ಶ್ರಮ ಮೀರಿ ಕೆಲಸ ನಿರ್ವಹಿಸಿದ್ದಾರೆ. ಭಯ ಪೀಡಿತ ಕೊರೋನ ಸಾಂಕ್ರಾಮಿಕ ರೋಗದ ಕುರಿತು ಜನರಲ್ಲಿ ಭಯ ಮುಕ್ತರನ್ನಾಗಿ ಮಾಡಿ ಜೀವಿಸಲು ಧೈರ್ಯ ತುಂಬುವ ಕೆಲಸ ಮಾಡಿದ್ದಾರೆ ಎಂದು ಶ್ಲಾಘಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಹೆಚ್.ಎಲ್.ಜನಾರ್ಧನ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಆರೋಗ್ಯ ಇಲಾಖೆಯ ಎಲ್ಲಾ ಉಚಿತ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಲು ಮಾಧ್ಯಮದವರ ಪಾತ್ರ ಬಹುಮುಖ್ಯವಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಆರೋಗ್ಯ ಸೇವೆಗಳ ಮಾಹಿತಿಯ ಅರಿವನ್ನು ಜನರಿಗೆ ತಲುಪಲು ಹಾಗೂ ದೈನಂದಿನ ಚಟುವಟಿಕೆಗಳನ್ನು ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಲು ಮಾಧ್ಯಮದವರ ತಮ್ಮ ಸಹಕಾರ ಅಗತ್ಯವಾಗಿದೆ ಎಂದರು.

ವಿವಿಧ ವಿಭಾಗದ ಅಧಿಕಾರಿಗಳಿಂದ ಕಾರ್ಯಾಗಾರ: ಕಾರ್ಯಾಗಾರದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಆರ್.ಅನಿಲ್ ಕುಮಾರ್ ಅವರು ತಾಯಿಕಾರ್ಡ್, ಗರ್ಭಿಣಿ ಆರೈಕೆ, ಜನನಿ ಸುರಕ್ಷಾ ಯೋಜನೆ, ಪೌಷ್ಠಿಕ ಪುನರ್ವಸತಿ ಕೇಂದ್ರ, ಸ್ನೇಹ ಕ್ಲಿನಿಕ್ ಇತರೆ ಸೇವೆಗಳ ಬಗ್ಗೆ ಮಾಹಿತಿ ನೀಡಿದರು.ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ಅವರು ಮಾತನಾಡಿ, ವಿಶ್ವ ಕ್ಷಯರೋಗ ದಿನವನ್ನು ಪ್ರತಿವರ್ಷ ಮಾರ್ಚ್ 24ರಂದು ಆಚರಣೆ ಮಾಡಲಾಗುತ್ತಿದ್ದು, ಈ ವರ್ಷದ ಘೋಷವಾಕ್ಯವು 'ಹೌದು, ನಾವು ಕ್ಷಯವನ್ನು ಕೊನೆಗಳಿಸಬಹುದು' ಎಂಬುದಾಗಿದೆ. ಕ್ಷಯರೋಗ ನಿರ್ಮೂಲನೆಯಲ್ಲಿ ಇಡೀ ರಾಜ್ಯದಲ್ಲಿಯೇ ಬಳ್ಳಾರಿ ಜಿಲ್ಲೆಯು 3 ಸ್ಥಾನದಲ್ಲಿದೆ ಎಂದು ಅವರು ತಿಳಿಸಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ, ಜಿಲ್ಲಾ ಕೀಟ ಶಾಸ್ತ್ರಜ್ಞೆ ಡಾ.ನಂದಿನಿ ಕಡಿ ಅವರು ತಮ್ಮ ವಿಭಾಗ ಅನುಷ್ಠಾನ ಕಾರ್ಯಕ್ರಮಗಳ ಬಗ್ಗೆ ವಿಷಯ ಮಂಡನೆ ಮಾಡಿದರು. ಈ ಸಂದರ್ಭದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಆರೋಗ್ಯ ಸೇವೆಗಳ ಕುರಿತ ಮಾಹಿತಿ ಭಿತ್ತಿಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಗುರುನಾಥ.ಬಿ ಚೌವ್ಹಾಣ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ್, ಡಾ.ಮಯೂರಿ ಸೇರಿದಂತೆ ಮಾಧ್ಯಮ ಪ್ರತಿನಿಧಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಕಾಂಗ್ರೆಸ್‌ನಿಂದ ಚುನಾವಣಾ ಪೂರ್ವಭಾವಿ ಸಭೆ



ಬಳ್ಳಾರಿ: ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಜಿ.ಎಸ್.ಮಹಮ್ಮದ್ ರಫೀಕ್ ಅವರ ನೇತೃತ್ವದಲ್ಲಿ, ಕರ್ನಾಟಕ ವಿಧಾನಸಭಾ ಚುನಾವಣೆ-2023ಕ್ಕೆ ಸಂಬಂಧಿಸಿದಂತೆ, ಚುನಾವಣಾ ಪೂರ್ವಭಾವಿ ಸಭೆಯನ್ನು ಮಂಗಳವಾರದಂದು ಹಮ್ಮಿಕೊಳ್ಳಲಾಗಿತ್ತು.

ಚುನಾವಣೆಗೆ ಸಂಬಂಧಿಸಿದಂತೆ ಪಕ್ಷದ ವತಿಯಿಂದ ಕೈಗೊಳ್ಳಬೇಕಾದ ಅನೇಕ ಕಾರ್ಯಕ್ರಮಗಳ ಕುಯಿರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷರಾದ ಮೇಟಿ ಪಂಪನಗೌಡ, ಖುರ್ಶೀದ್ ಭಾನು, ಪ್ರಧಾನ ಕಾರ್ಯದರ್ಶಿಗಳಾದ ಕಾಂತಿನೋಹ ವಿಲ್ಸನ್, ಡಿ. ಅಯಾಜ್ ಅಹಮ್ಮದ್, ಕೆ.ಬಿ.ಗೋಪಿ ಕೃಷ್ಣ, ಎಂ.ಕುಮಾರಮ್ಮ, ಕಾರ್ಯದರ್ಶಿಗಳಾದ ಜಿ.ಎಸ್. ಈರನ ಗೌಡ ಬಿ.ಎಂ.ಸೂರ್ಯನಾರಾಯಣ, ವೈ.ಶ್ರೀನಿವಾಸುಲು, ಕೆ.ಬಿ.ಅಂಜಿನಿ, ಕಾರ್ಯಕಾರಿ ಸಮಿತಿಯ ಸದಸ್ಯರಾದ ದ್ರಾಕ್ಷಾಯಣಿ, ಬ್ಲಾಕ್ ಅಧ್ಯಕ್ಷರಾದ ಅರ್ಷದ್ ಅಹಮ್ಮದ್ ಗನಿ, ಬ್ಲಾಕ್ ಅಧ್ಯಕ್ಷರು ಹಾಗೂ ಮಹಾನಗರ ಪಾಲಿಕೆ ಸದಸ್ಯರಾದ ಪೇರಂ ವಿವೇಕ್, ಐ.ಎನ್.ಟಿ.ಯು.ಸಿ ವಿಭಾಗದ ಜಿಲ್ಲಾಧ್ಯಕ್ಷರಾದ ಕೆ.ತಾಯಪ್ಪ, ಎಸ್.ಸಿ ವಿಭಾಗದ ಅಧ್ಯಕ್ಷರಾದ ಎನ್.ವಿ.ಯರಕುಲಸ್ವಾಮಿ, ಸೇವಾದಳ ವಿಭಾಗದ ಅಧ್ಯಕ್ಷರಾದ ಮುರಾರ್ಜಿ ರೆಡ್ಡಿ, ಸಾಮಾಜಿಕ ಜಾಲತಾಣ ವಿಭಾಗದ ಸಂಯೋಜಯಿಕರಾದ ಶೇಕ್ ಅಫಕ್ ಹುಸೇನ್, ಎನ್.ಎಸ್.ಯು.ಐ ಅಧ್ಯಕ್ಷರಾದ ತಿಪ್ಪೇಶ್ ಗಚ್ಚಿಮನಿ, ಮಹಾನಗರ ಪಾಲಿಕೆ ಸದಸ್ಯರುಗಳಾದ ಮುಲ್ಲಂಗಿ ನಂದೀಶ್, ಮಹಮ್ಮದ್, ಡಿ.ಸೂರಿ, ಕೆ.ಹೊನ್ನಪ್ಪ, ಶಿವರಾಜ್, ಕುಬೇರ, ವಿವೇಕನಂದ, ಜಬ್ಬಾರ್ ಸಾಬ್, ರಾಜಶೇಖರ್, ಮಿಂಚು ಶ್ರೀನಿವಾಸುಲು, ಬಿ.ಆರ್.ಎಲ್.ಶ್ರೀನಿವಾಸುಲು, ಬಿ.ಸೋಮಶೇಖರ್ ಹಾಗೂ ಇತರರು ಉಪಸ್ಥಿತರಿದ್ದರು.

# ಗುರು ತೋರಿಸದಲ್ಲದೆ ಕಾಣಿಸದಣ್ಣ, ಸಾರೆ ಚಲ್ಯಾದೆ ಮುಕುತಿ: ಕೈಲಾಸನಾಥ ಶ್ರೀ

ಕೊಲ್ಹಾರ. ಗುರು ತೋರಿಸದಲ್ಲದೆ ಕಾಣಿಸದಣ್ಣ ಸಾರೆ ಚಲ್ಯಾದೆ ಮುಕುತಿ ಎಂದು ಶೀಲವಂತ ಹಿರೇಮಠದ ಕೈಲಾಸನಾಥ ಸ್ವಾಮಿಜಿಗಳು ಹೇಳಿದರು

ಪಟ್ಟಣದ ಇಕ್ರಾ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು ಮಕ್ಕಳ ಬೆಳವಣಿಗೆಯಲ್ಲಿ ಗುರುವಿನ ಪಾತ್ರ ಅಪಾರವಾಗಿದೆ ಎಂದು ಗುರುವಿನ ಮಹತ್ವದ ಬಗ್ಗೆ ಮಾರ್ಮಿಕವಾಗಿ ಹೇಳಿದರು "ಜ್ಯೋತಿಯ ಮುಟ್ಟಿದ ಬತ್ತಿ ಜ್ಯೋತಿ ಅಪ್ಪುದಯ್ಯ, ಪ್ರಸಾದವ ಮುಟ್ಟಿದ



ಪದಾರ್ಥ ಪ್ರಸಾದ ಒಪ್ಪುದಯ್ಯ,

ಸಾಗರ ಸೇರುವ ನದಿಗಳೆಲ್ಲ ಸಾಗರ ಒಪ್ಪುವಯ್ಯ ಇಕ್ರಾ ಶಾಲೆಯಲ್ಲಿ ಕಲಿತ ಮಕ್ಕಳೆಲ್ಲ ದೇಶದ ಪ್ರಗತಿಯನ್ನು ತರುವ ವಿದ್ಯಾರ್ಥಿಗಳಾಗುಒಪ್ಪರಯ್ಯ" ಎಂದು ಹಾರೈಸಿದರು.

ಧರ್ಮಗುರುಗಳಾದ ಹಜರತ ಅಲ್ಲಾಮಾ ಸೈಯ್ಯದ ಮೊಹಮ್ಮದ ತನ್ವೀರ್ ಹಾಶ್ಮೀ ಮಾತನಾಡುತ್ತಾ ಇಕ್ರಾ ಶಾಲೆಯ ಮೂಲಕ ವಿದ್ಯೆಯನ್ನು ನೀಡುತ್ತಿರುವುದು ಸಂತಸದ ವಿಷಯವಾಗಿದೆ ಶಾಲೆಯು ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.

ನಿವೃತ್ತ ಪ್ರಾಚಾರ್ಯ ಬಿ.ಎಸ್ ನಿಂಬಾಳ್ಕರ್ ಮಾತನಾಡುತ್ತಾ ಗುರುವಿನ ಜೊತೆ ಗುರಿಯನ್ನಿಟ್ಟುಕೊಂಡು ಮುನ್ನಡೆದಾಗ ಯಶಸ್ಸು ಸಾಧ್ಯ ಎಂದು ಹೇಳಿದರು.

ಬಿಜೆಪಿ ಮುಖಂಡ ಅಪ್ಪುಗೌಡ ಪಾಟೀಲ(ಮನಗೂಳಿ) ಮಾತನಾಡಿ ದೇಶಕ್ಕೆ ಉತ್ತಮ ಪ್ರಜೆಗಳನ್ನು ನೀಡುವಲ್ಲಿ ಶಿಕ್ಷಣ ಸಂಸ್ಥೆಗಳ ಪಾಲು ಅಪಾರವಾಗಿದೆ ಎಂದರು.

ಶಾಲೆಯ ಅಧ್ಯಕ್ಷ ಜಾವೀದ ಬಿಜಾಪುರ ಮಾತನಾಡುತ್ತಾ ಶಿಕ್ಷಕರ ಜವಾಬ್ದಾರಿಯಂತೆ ಪಾಲಕರ ಜವಾಬ್ದಾರಿ ಕೂಡ ಅಷ್ಟೇ ಪ್ರಮುಖವಾಗಿದ್ದು, ಪಾಲಕರು ಕೂಡ ಮಕ್ಕಳ ಕಲಿಕೆಯೆಡೆಗೆ ಗಮನ ಕೊಡಬೇಕು ಎಂದು ಹೇಳಿದರು.

# ಮೂಲಭೂತ ಸೌಲಭ್ಯ ವಂಚಿತ ಗ್ರಾಮಗಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರದ ಸೇವೆ

ಬೆಳಗಾವಿ: ಪ್ರಕೃತಿಯ ಸುಂದರ ಮಡಿಲಿನಲ್ಲಿರುವ ಬೆಳಗಾವಿ ಜಿಲ್ಲೆಯಖಾನಾಪುರತಾಲೂಕಿನ ಕೆಲವೊಂದು ಹಳ್ಳಿಗಳಾದ ಕಾಪೋಲಿ, ಚಾಪೊಲಿ, ಹಬ್ಬಾನಟ್ಟಿ, ವಾಡೆ ಸಾಡಾ, ಕನಕುಂಬಿಗಳಂತಹ ಅಲ್ಪಜನಸಂಖ್ಯೆಯ, ಮೂಲಭೂತ ಸೌಲಭ್ಯ ವಂಚಿತ ಗ್ರಾಮಗಳಿಗೆ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ವತಿಯಿಂದ ಕಳೆದ ಜನೆವರಿಯಿಂದ ಪ್ರತಿ ತಿಂಗಳಿಗೆ 2 ಬಾರಿಯಂತೆ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ. ಎಸ್ ಸಿ ಧಾರವಾಡಅವರ ಸೂಚನೆಯಂತೆ ಈ ಗ್ರಾಮಗಳನ್ನು ಗುರುತಿಸಿ ಅಲ್ಲಿಇದುವರೆಗೂ ಸುಮಾರುಒಂದು ಸಾವಿರಕ್ಕೂಅಧಿಕ ನಾಗರಿಕರನ್ನು ತಪಾಸಣೆಗೊಳಪಡಿಸಿ ಉಚಿತವಾಗಿ ಔಷಧಿಗಳನ್ನು ವಿತರಿಸಲಾಗಿದೆ.

ಈ ಶಿಬಿರಗಳಲ್ಲಿ ಭಾಗವಹಿಸಿ ತಪಾಸಣೆ ಗೊಳಪಟ್ಟವರಲ್ಲಿ ಹೆಚ್ಚಿನ ಚಿಕಿತ್ಸೆ ಅವಶ್ಯವಿರುವವರಿಗೆ ಆಸ್ಪತ್ರೆಯಲ್ಲಿನ ಸೇವೆಗಳನ್ನು ಉಪಯೋಗಿಸಲು ಡಾ. ಎಸ್ ಸಿ ಧಾರವಾಡಅವರು ಸೂಚಿಸಿದ್ದಾರೆ.

ಇದೇ ರೀತಿಯಾಗಿ ಖಾನಾಪುರ ತಾಲೂಕಿನ ವಿವಿಧ ಹಳ್ಳಿಗಳಿಗೆ ಇನ್ನೂಅಧಿಕ ಆರೋಗ್ಯ ಸೇವೆಗಳನ್ನು ನೀಡಲುಇಂಗಿತ ವ್ಯಕ್ತಪಡಿಸಿದ್ದಾರೆ.

ಯುಎಸ್‌ಎಮ್ ಕೆ ಎಲ್ ಇ ಯ ನಿರ್ದೇಶಕರಾದಡಾ. ಹೆಚ್ ಬಿ ರಾಜಶೇಖರಅವರು ಶಿಬಿರದಲ್ಲಿ ನಿರತರಾದ ವೈದ್ಯಕೀಯತಂಡವನ್ನು ಅಭಿನಂದಿಸಿದ್ದಾರೆ ಹಾಗೂ ಇನ್ನೂ ಹೆಚ್ಚಿನ ಸೇವೆಗಳನ್ನು ನೀಡಲು ಕೆ ಎಲ್ ಇ ಸಂಸ್ಥೆಯು ಸದಾ ಸನ್ನದ್ದವಾಗಿದೆಎಂದುಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಕೆ ಎಲ್ ಇ ಸಂಸ್ಥೆಯಕಾರ್ಯಾಧ್ಯಕ್ಷರಾದಡಾ.ಪ್ರಭಾಕರಕೋರೆಅವರುವೈದ್ಯರತಂಡಕಾರ್ಯಕ್ಕೆ ಸಂತಸ ವ್ಯಕ್ತ ಪಡಿಸಿದ್ದಾರೆ.

# ಖಂಡಿತ ಕರ್ನಾಟಕದಲ್ಲಿ ಸುವರ್ಣ ಯುಗ ಆರಂಭವಾಗಲಿದೆ: ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ; ಒಂದೆಡೆ ಅಗತ್ಯವಸ್ತುಗಳ ಬೆಲೆ ಗಗನಕ್ಕೇರುತ್ತಿದೆ. ಇನ್ನೊಂದೆಡೆ ಜನಸಾಮಾನ್ಯರ ಬದುಕು ಪಾತಾಳಕ್ಕೆ ಕುಸಿಯುತ್ತಿದೆ. ಜನರ ಸಮಸ್ಯೆಯತ್ತ ಗಮನ ಹರಿಸದ ರಾಜ್ಯ ಬಿಜೆಪಿ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ವಾಗ್ದಾಳಿ ನಡೆಸಿದ್ದಾರೆ.

ಬೆಳಗಾವಿಯಲ್ಲಿ ನಡೆದ ಯುವಕ್ರಾಂತಿ ಸಮಾವೇಶದಲ್ಲಿ ಮಾತನಾಡಿದ ಲಕ್ಷ್ಮೀ ಹೆಬ್ಬಾಳ್ಕರ್, ಇದು ರೈತರು, ಬಡವರು, ಜನಸಾಮಾನ್ಯರು ಬದುಕುವ ಕಾಲ ಅಲ್ಲ, ಆದರೆ ಕಾಂಗ್ರೆಸ್ ಪಕ್ಷ ತಮ್ಮ ಶ್ರಮಕ್ಕೆ, ಬೆವರಿಗೆ ಬೆಲೆ ಕೊಟ್ಟೆ ಕೊಡುತ್ತೆ. ಜನರ ಆಶೀರ್ವಾದದೊಂದಿಗೆ ಮುಂಬರುವ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದೇ ಬರುತ್ತೆ. ಜನರ ಕಷ್ಟವನ್ನು ಪರಿಹರಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಕಾರ್ಯಕ್ರಮಗಳನ್ನು ರೂಪಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಿಮ್ಮ ಭವಿಷ್ಯ ನಮ್ಮ ಭವಿಷ್ಯ. ಕಾಂಗ್ರೆಸ್ ಯಾವತ್ತಿದ್ದರೂ ಜನಸಾಮಾನ್ಯರ ಭವಿಷ್ಯದ ಬಗ್ಗೆ ಚಿಂತನೆ ನಡೆಸುತ್ತದೆ. ಮಹಾತ್ಮ ಗಾಂಧಿಜಿ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಈ ದೇಶಕ್ಕಾಗಿ, ಜನರಿಗಾಗಿ ಪ್ರಾಣವನ್ನೇ ಕೊಟ್ಟವರು. ಆದರೆ ಬಿಜೆಪಿಯ ಯಾರಾದರೂ ಒಬ್ಬರೇ ಒಬ್ಬರು ಈ ದೇಶಕ್ಕಾಗಿ, ಜನರಿಗಾಗಿ ಪ್ರಾಣತ್ಯಾಗ ಮಾಡಿದ ಯಾರಾದರೂ ಇದ್ದಾರಾ? ವಿಚಾರ ಮಾಡಿ. ಇಂತವರಿಂದ ಏನೂ ಸಾಧ್ಯವಿಲ್ಲ, ಯಾವ ಪ್ರಗತಿಯೂ ಸಾಧ್ಯವಿಲ್ಲ, ಅಭಿವೃದ್ಧಿಯೂ ಸಾಧ್ಯವಿಲ್ಲ. ಬಿಜೆಪಿಯವರಿಂದ ಸಾಧ್ಯ



ಎನ್ನುವುದು ಏನಾದರೂ ಇದ್ದರೆ ಅದು ಜಾತಿ ಜಾತಿಗಳ ನಡುವೆ ವಿಷಬೀಜ ಬಿತ್ತಿ ಸಮಾಜದ ಸುಂದರ ವಾತಾವರಣವನ್ನು ಕೆಡಿಸುವುದಷ್ಟೇ ಎಂದು ಕಿಡಿಕಾರಿದರು.

ಮೊನ್ನೆ ಸಿ.ಟಿ.ರವಿಯವರು ಹೇಳುತ್ತಿದ್ದರು, ವೀರಶೈವ ಲಿಂಗಾಯಿತರಿಗೆ ಅಂತಹ ಪ್ರಾಮುಖ್ಯತೆಯನ್ನು ಕೊಡುವುದು ಬೇಡ ಎಂದು. ಸಿ.ಟಿ.ರವಿ ಅಣ್ಣನವರೇ ನಿಮಗೆ ನಾಚಿಕೆಯಾಗಬೇಕು.

ಅಧಿಕಾರದ ಅಮಲು ಯಾವ ಮಟ್ಟಕ್ಕೆ ಏರಿದೆ ಯಡಿಯೂರಪ್ಪನವರ ಹೆಸರು ಹೇಳಿ ಅಧಿಕಾರಕ್ಕೆ ಬಂದಂತಹ ನೀವು ಇಂದು ವೀರಶೈವ ಲಿಂಗಾಯಿತ ಸಮುದಾಯಕ್ಕೆ

ಪ್ರಾಮುಖ್ಯತೆ ಕೊಡುವುದು ಬೇಡ ಎನ್ನುತ್ತಿದ್ದೀರಾ. ಇಂದು ನಿಮಗೆ ವೀರಶೈವ ಲಿಂಗಾಯಿತರು ಎಂದು ಹಿಗ್ಗಾ ಮುಗ್ಗಾ ವಾಗ್ದಾಳಿ ನಡೆಸಿದರು.

ಬಿಜೆಪಿಯ ಒಬ್ಬರು ಹೇಳ್ತಾರೆ ಮುಂಬರುವ ದಿನಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಮುಸ್ಲಿಂ ಬಾಂಧವರ ಮದರಸಾಗಳನ್ನು ಮುಚ್ಚಿ ಹಾಕುತ್ತೇವೆ ಎಂದು, ಇನ್ನೊಬ್ಬರು ಹೇಳ್ತಾರೆ ವೀರಶೈವ ಲಿಂಗಾಯಿತರಿಗೆ ಪ್ರಾಮುಖ್ಯತೆ ಕೊಡಬೇಡಿ ಎಂದು, ಮತ್ತೊಬ್ಬರು ಹೇಳುತ್ತಾರೆ ಮಾಜಿ ಸಿಎಂ, ವಿಪಕ್ಷ ನಾಯಕ ಸಿದ್ದರಾಮಯ್ಯರನ್ನು ಹೊಡೆದು ಹಾಕಿ ನಿದ್ದೆ ಬಿಜೆಪಿಯವರು ರಾಮ ರಾಮ ಎಂದು ಬಾಯಲ್ಲಿ ಹೇಳುತ್ತಾ ರಾವಣನ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಿವೆಲ್ಲರೂ ಸ್ವಾಭಿಮಾನಿಗಳು, ಬೆಲೆ ಏರಿಕೆಯಿಂದಾಗಿ ನಿವೆಲ್ಲರೂ ತತ್ತರಿಸಿದ್ದೀರಿ. ಇನ್ನು ಕೇವಲ 50 ದಿನಗಳಲ್ಲಿ ಚುನಾವಣೆ ಬರಲಿದೆ.

ಚುನಾವಣೆಯಲ್ಲಿ ನೀವೆಲ್ಲರೂ ಕಾಂಗ್ರೆಸ್ ಗೆ ಮತವನ್ನು ನೀಡಿ. ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತನ್ನಿ. ಖಂಡಿತವಾಗಿಯೂ ನಾವು ಕರ್ನಾಟಕ ರಾಜ್ಯದಲ್ಲಿ ಸುವರ್ಣಯುಗವನ್ನು ಪ್ರಾರಂಭಮಾಡುತ್ತೇವೆ ಎಂದು ಭರವಸೆ ನೀಡುತ್ತೇನೆ ಎಂದು ಹೇಳಿದರು.

# ಇಂದು ಕನಕ ದುರ್ಗಮ್ಮ ದೇವಸ್ಥಾನ ಹತ್ತಿರ ರೈಲ್ವೆ ಕೆಳ ಸೇತುವೆಯ ಪ್ರಸ್ತಾವಿತ ವಿಸ್ತರಣೆ ಕಾಮಗಾರಿಯ ಶಂಕುಸ್ಥಾಪನೆ

ಬಳ್ಳಾರಿ: ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಂದಾಜು ರೂ.8.87 ಕೋಟಿ ಮೊತ್ತದಲ್ಲಿ ಕನಕ ದುರ್ಗಮ್ಮ ದೇವಸ್ಥಾನ ಹತ್ತಿರದ ರೈಲ್ವೆ ಕೆಳ ಸೇತುವೆಯ ಪ್ರಸ್ತಾವಿತ ವಿಸ್ತರಣೆ ಕಾಮಗಾರಿಯ ಶಂಕುಸ್ಥಾಪನೆಯು ಮಾ.22ರಂದು ಬೆಳಗ್ಗೆ 8.30 ಕ್ಕೆ ನಗರದ ಕೋರ್ಟ್ ರಸ್ತೆಯಲ್ಲಿ ನೆರವೇರಲಿದೆ. ಸಾರಿಗೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಶ್ರೀರಾಮುಲು ಅವರು ಶಂಕು ಸ್ಥಾಪನೆ ನೆರವೇರಿಸುವರು.ಬಳ್ಳಾರಿ ನಗರ ಶಾಸಕ ಜಿ. ಸೋಮಶೇಖರ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.



ಕೇಂದ್ರ ರೈಲ್ವೇ ಸಚಿವರು ಹಾಗೂ ಸಂವಹನ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವರಾದ ಅಶ್ವಿನಿ ವೈಷ್ಣವ್, ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್ ಅವರು ಘನ ಉಪಸ್ಥಿತಿ ಇರುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ವೈ.ದೇವೇಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ಎಂಎಲ್ ಸಿಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ್, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಗುತ್ತಿಗನೂರು ವಿರುಪಾಕ್ಷಗೌಡ, ಮಹಾನಗರ ಪಾಲಿಕೆಯ ಮಹಾಪೌರರಾದ ಎಂ.ರಾಜೇಶ್ವರಿ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸರ್ವಶೆಟ್ಟಿ ಮಾರುತಿ ಪ್ರಸಾದ್ ಅವರು ಭಾಗವಹಿಸುವರು.ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಜಯ್ ನಾಗಭೂಷಣ, ಜಿಲ್ಲಾಧಿಕಾರಿ ಪವನ್‌ಕುಮಾರ್ ಮಾಲಪಾಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತ ವಿ.ರಮೇಶ್ ಅವರು ಸೇರಿದಂತೆ ಇತರರು ಉಪಸ್ಥಿತರಿರಲಿದ್ದಾರೆ ಎಂದು ಬುಡಾ ಅಧ್ಯಕ್ಷ ಮಾರುತಿ ಪ್ರಸಾದ್ ಅವರು ತಿಳಿಸಿದ್ದಾರೆ.

# ಜಿಲ್ಲಾ ಕೇಂದ್ರ ಕಾರಾಗೃಹದ ಮೇಲೆ 'ಎಸ್‌ಪಿ' ದಾಳಿ



ಬಳ್ಳಾರಿ : ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರುರವರು ತಮ್ಮ ಸಿಬ್ಬಂದಿಯೊಂದಿಗೆ ಜಿಲ್ಲಾ ಕೇಂದ್ರ ಕಾರಾಗೃಹದ ಮೇಲೆ ಮಂಗಳವಾರದಂದು ಬೆಳ್ಳಂಬೆಳಿಗ್ಗೆ ದಾಳಿ ಮಾಡಿ ಮೊಬೈಲ್ ಮತ್ತು ಸಿಮ್‌ಕಾರ್ಡ್ಗಳನ್ನು ವಶಪಡಿಸಿಕೊಂಡಿದ್ದಾರೆ.

ಜಿಲ್ಲಾ ಕೇಂದ್ರ ಕಾರಾಗೃಹದ ಒಳಗಡೆ ಇರುವ ಕೈದಿಗಳು ಜೈಲಿನಲ್ಲಿ ನಿಷೇಧಿತ ವಸ್ತುಗಳಾದ ಮೊಬೈಲ್, ಸಿಮ್‌ಕಾರ್ಡ್ಗಳು ಮತ್ತು ಗಾಂಜಾ ವಸ್ತುಗಳನ್ನು ಬಳಸುತ್ತಿದ್ದಾರೆಂದು ಎಸ್.ಪಿಯವರಿಗೆ ಮಾಹಿತಿ ಬಂದ ಹಿನ್ನಲೆಯಲ್ಲಿ ಖುದ್ದು ಕಾರ್ಯಾಚರಣೆಗಿಳಿದ ಎಸ್.ಪಿ.ರಂಜಿತ್ ಕುಮಾರ್ ಬಂಡಾರುರವರು ತಮ್ಮ ಸಿಬ್ಬಂದಿಯೊಂದಿಗೆ ಮಂಗಳವಾರ ಬೆಳಿಗ್ಗೆ 6.30 ಗಂಟೆಯಿಂದ 8.30 ಗಂಟೆಯವರೆಗೆ ಕೇಂದ್ರ ಕಾರಾಗೃಹದ ಅಧೀಕ್ಷರಾದ ಲತಾ, ಉಪ ಅಧೀಕ್ಷರಾದ ಅಂಬರೀಶ್ ಪೂಜಾರಿ ಮತ್ತು ಅವರ ಸಿಬ್ಬಂದಿಯೊಂದಿಗೆ ಕಾರಾಗೃಹದ ಎಲ್ಲಾ ಕೋಣೆಗಳನ್ನು ತಪಾಸಣೆ ಮಾಡಿದ ಸಂದರ್ಭದಲ್ಲಿ ಒಂದು ಸಿಮ್ ಇರುವ ಮೊಬೈಲ್ ಹಾಗೂ ಮೂರು ಸಿಮ್ ಕಾರ್ಡುಗಳು ದೊರಕಿರುತ್ತವೆ.

ಎಸ್.ಪಿ.ಯವರೊಂದಿಗೆ ಬಳ್ಳಾರಿ ನಗರ ಉಪ ವಿಭಾಗದ ಡಿ.ಎಸ್.ಪಿ. ಬಸವರಾಜ್. ಕೆ., ಪೊಲೀಸ್ ಇನ್ಸ್ಪೆಕ್ಟರ್‌ಗಳಾದ ಶ್ರೀನಿವಾಸ ಮೇಟಿ, ಸಿದ್ದರಾಮೇಶ್ವರ, ಎಂ.ಎನ್.ಸಿಂಧೂರು, ವಾಸುಕುಮಾರ್, ಬಸವರಾಜ್ ಪಾಟೀಲ್, ಗುಂಡೂರಾವ್, ಅಂಬರೀಶ್ ಹುಬ್ಬಳ್ಳಿ, ಅಮೋಘ್, ಗೋವಿಂದರವರು ಸೇರಿದಂತೆ 100 ಪೊಲೀಸ್ ಸಿಬ್ಬಂದಿ ಈ ದಾಳಿಯಲ್ಲಿ ಭಾಗವಹಿಸಿದ್ದರು.

# ಬಿಜೆಪಿ ಕರ್ನಾಟಕ "ರೈತ ಸಮಾವೇಶ"



ಬಳ್ಳಾರಿ : ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ನಗರದ ಕಮ್ಮವಾರಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದ್ದ ಬಳ್ಳಾರಿ ಜಿಲ್ಲಾ ಬಿ.ಜೆ.ಪಿ ರೈತ ಮೋರ್ಚಾ ಸಮಾವೇಶವು ಜನಪ್ರಿಯ ಶಾಸಕರಾದ ಎಂ.ಎಸ್.ಸೋಮಲಿಂಗಪ್ಪರವರ ನೇತೃತ್ವದಲ್ಲಿ ಬಹಳ ಅದ್ದೂರಿಯಾಗಿ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಎಸ್.ಕೆ.ಬೆಳ್ಳುಬ್ಬಿ ಸರ್, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಷಣ್ಮುಖ ಗುರಿಕಾರ್, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಗುರುಲಿಂಗನಗೌಡ, ಮುರಾರಿ ಗೌಡ, ಪ್ರಕಾಶ್ ಗೌಡ, ಸಿದ್ದಪ್ಪ, ಗಾಳಿ ಶಂಕ್ರಪ್ಪ, ಪಕ್ಷದ ಹಿರಿಯರು, ಕಾರ್ಯಕರ್ತರು ಭಾಗಿಯಾಗಿದ್ದರು.

# ಸಾರ್ವಜನಿಕ ಶಿಕ್ಷಣ ವ್ಯವಸ್ಥೆ ಬಲಗೊಳಿಸುವುದು ರಾಜಕೀಯ ಪಕ್ಷಗಳ ಆದ್ಯತೆಯಾಗಲಿ: ಎಸ್‌ಐಓ

ಬಳ್ಳಾರಿ : ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ರಾಜಕೀಯ ಪಕ್ಷಗಳು ತಮ್ಮ ಪ್ರಣಾಳಿಕೆಯಲ್ಲಿ ವಿದ್ಯಾರ್ಥಿ – ಯುವಜನರ ಬೇಡಿಕೆಯ ವಿಚಾರಗಳನ್ನು ಸೇರಿಸಬೇಕು ಮತ್ತು ಯುವಜನರ ಮತಗಳು ನಿರ್ಣಯಿಸುವಂತೆ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ಜನಾಭಿಪ್ರಾಯ ಮೂಡಿಸಿಬೇಕು ಮತ್ತು ನಮ್ಮ ಸಂಘಟನೆಯ ಬೇಡಿಕೆಗಳನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಢಿ ಮತ್ತು ಬದ್ಧತೆಯನ್ನು ಖಚಿತ ಪಡಿಸಬೇಕು ಎಂದು ಸ್ಟೂಡೆಂಟ್ ಇಸ್ಲಾಮಿಕ್ ಸಂಘಟನೆ ಜಿಲ್ಲಾ ಘಟಕ ಬಳ್ಳಾರಿ ಅಗ್ರಹಿಸಿದೆ.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಿ ಮಾತನಾಡಿದ ಸಂಘದ ಮುಖಂಡರುಗಳು, ಆರ್ಟಿಕಲ್ 21ಎ ಮೂಲಕ ಶಿಕ್ಷಣ ಸಂವಿಧಾನಬದ್ಧ ಮೂಲಭೂತ ಹಕ್ಕಾಗಿದೆ. ಸರ್ಕಾರದ ಸ್ವಾಮ್ಯದಿಂದ ಈ ಹಕ್ಕು ದಿನೇ ದಿನೇ ದುರ್ಬಳಕೆಯಾಗುತ್ತಿರುವದು, ಶೋಚನೀಯ, ಮೂಲಭೂತ ಹಕ್ಕುಗಳು ಇವತ್ತು ಸರ್ಕಾರದ ನಿರ್ಲಕ್ಷ್ಯಕ್ಕೆ ಒಳಗಾಗುತ್ತಿರುವುದು ದುರಂತವಾಗಿದೆ, ಇಂತಹ ಕಾಲದಲ್ಲಿ ಸಂವಿಧಾನದ ಮೂಲಭೂತ ಹಕ್ಕನ್ನು ಖಾತರಿಪಡಿಸಿದ ಶಿಕ್ಷಣದ ಹಕ್ಕನ್ನು ('ಆರ್ಟಿಇ'ಯನ್ನು) ಸಮರ್ಪಕವಾಗಿ ಜಾರಿ ಮಾಡಬೇಕೆಂದರು.

ಪೂರ್ವ ಪ್ರಾಥಮಿಕ ಶಿಕ್ಷಣದ ಅಭ್ಯಾಸಿಸುವ ಮಕ್ಕಳ ಅಪೌಷ್ಟಿಕತೆ ನಿವಾರಣೆ ಮತ್ತು ಕಲಿಕಾ ಪ್ರಕ್ರಿಯೆಯತ್ತ ತಯಾರುಗೊಳಿಸುವ ಅಂಗನವಾಡಿ ವ್ಯವಸ್ಥೆಯನ್ನು ಸಶಕ್ತಗೊಳಿಸಿ, ಗ್ರಾಮೀಣ ಮಕ್ಕಳ ಮತ್ತು ವಲಸೆ ಹಾಗೂ ಅಸಂಘಟಿತ ಕಾರ್ಮಿಕರ ಮಕ್ಕಳ ಶಾಲಾ ಹೊರಗುಳಿಯುವಿಕೆ (ಡ್ರಾಪ್ ಔಟ್) ಯನ್ನು ತಡೆಗಟ್ಟಿ ಮಕ್ಕಳ ಶಾಲಾ ದಾಖಲಾತಿಯನ್ನು ಹೆಚ್ಚಿಸಬೇಕು.

ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಸಹಕಾರಿಯಾಗುವ ವಿದ್ಯಾರ್ಥಿ ವೇತನ ಮತ್ತು ಶಾಲಾ ಸಮವಸ್ತ್ರ



ದಂತಹ ಯೋಜನೆಗಳನ್ನು ಸಕಾಲಕ್ಕೆ ನೀಡಿ, ಶಾಲಾ ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಮತ್ತು ಸೂಕ್ತ ಕಲಿಕಾ ಸಂಪನ್ಮೂಲ ಒದಗಿಸುವ ಮೂಲಕ ಶಾಲಾ ಚಟುವಟಿಕೆಗಳಲ್ಲಿನ ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆಗೆ ಕಲಿಕಾ ವಾತಾವರಣವನ್ನು ಕಲ್ಪಿಸಬೇಕು ಹಾಗೂ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಸುಮಾರು 50% ಶಿಕ್ಷಕರ ಹುದ್ದೆಗಳು ಭರ್ತಿಮಾಡಬೇಕೆಂದರು. ಸರ್ಕಾರದ ವಾರ್ಷಿಕ ಬಜೆಟ್ ಹಂಚಿಕೆಯಲ್ಲಿ ಕೊಠಾರಿ ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ಉನ್ನತ ಶಿಕ್ಷಣದ ವ್ಯವಸ್ಥೆಯು ತೀರಾ ಚಿಂತಾಜನಕವಾಗಿದ್ದು, ರಾಜ್ಯದ ಬಹುತೇಕ ವಿ ವಿ ಗಳು ಸರ್ಕಾರದ ಸರಿಯಾದ ಅನುದಾನ ಮತ್ತು ನಿರ್ವಹಣೆ ಇಲ್ಲದೇ, ಅವುಗಳು ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ವಿಫಲವಾಗಿವೆ.

ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ವಿವಿ ಗಳ ಸೂಕ್ತನಿರ್ವಹಣೆಗಾಗಿ ಮತ್ತು ಉನ್ನತೀಕರಣಕ್ಕಾಗಿ ವಿಶೇಷ ಗಮನ ಹರಿಸುವುದು ಅಗತ್ಯವಿದೆ ಎಂದರು. ನಮ್ಮ ಸಂಘಟನೆ 2020ರಲ್ಲಿ ಪ್ರಸ್ತಾಪಿಸಿದಂತೆ ವಿದೇಶಿ ಖಾಸಗಿ ವಿವಿಗಳನ್ನು ಭಾರತದಲ್ಲಿ ಹೊಸದಾಗಿ ಆರಂಭಿಸುವುದಕ್ಕಿಂತ ಚಾಲ್ತಿಯಲ್ಲಿರುವ ವಿವಿಗಳಲ್ಲಿ ಗುಣಮಟ್ಟದ ಶಿಕ್ಷಣವನ್ನು ಖಾತರಿಪಡಿಸಲು ವಿದೇಶ ಪ್ರಾಧ್ಯಾಪಕರನ್ನು ವಿಶೇಷ ಅಥವಾ ಅತಿಥಿ ಉಪನ್ಯಾಸಕರನ್ನಾಗಿ ನೇಮಕ ಮಾಡಬೇಕು ಹಾಗೂ ರಾಜ್ಯದ ಮಟ್ಟದ ಮತ್ತು ಕೇಂದ್ರಿಯ ವಿವಿಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡಿ, ಇಲ್ಲಿನ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ರಾಜಕೀಯ ಪಕ್ಷಗಳನ್ನು ಒತ್ತಾಯಿಸಿದರು.

ಶಾಲಾ-ಕಾಲೇಜು ಕ್ಯಾಂಪಸ್ ಗಳು ದೇಶದ ಭವಿಷ್ಯ ರೂಪಿಸುವ ತಾಣಗಳಾಗಿವೆ, ಇಂತಹ ಕ್ಯಾಂಪಸ್ ಗಳಲ್ಲಿ ಜಾತಿ ಮತ್ತು ಧರ್ಮದ ನಿಂದನೆ ಹಾಗೂ ತಾರತಮ್ಯದಂತಹ ಅನೇಕ ಘಟನೆಗಳು ಇತ್ತಿಚೆಗೆ ವರದಿಯಾಗುತ್ತಿರುವುದು ಆಘಾತಕಾರಿ, ಇದನ್ನು ತಡೆಹಿಡಿಯಲು ಮತ್ತು ಪರಸ್ಪರರ ನಡುವೆ ಸಹೋದರತೆ ಹಾಗೂ ಸಾಮರಸ್ಯವನ್ನು ಬಲಿಷ್ಟಗೊಳಿಸಬೇಕಿದೆ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳನ್ನು ರಾಜ್ಯದಲ್ಲಿ ಶೈಕ್ಷಣಕವಾಗಿ ಹಿಂದುಳಿದ ಜಿಲ್ಲೆಗಳಲ್ಲಿ ಪ್ರಾರಂಭಿಸಿ, ಆ ಭಾಗದ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಬೇಕು. ಉನ್ನತ ಶಿಕ್ಷಣದಲ್ಲಿನ ಸಾಮಾನ್ಯ ದಾಖಲಾತಿ ಅನುಪಾತ 2019-20 ರಲ್ಲಿ 32% ಇದ್ದು, ಅದನ್ನು ಹೆಚ್ಚಿಸಲು ಮತ್ತು ಉನ್ನತ ಶಿಕ್ಷಣದತ್ತ ವಿದ್ಯಾರ್ಥಿಗಳನ್ನು ಆಕರ್ಷಿಸುವಂತ ಯೋಜನೆಗಳನ್ನು ರೂಪಿಸಬೇಕೆಂದರು. ಈ ಸಂದರ್ಭದಲ್ಲಿ ಎಸ್.ಐ.ಓ ಮುಖಂಡರಾದ ಹುಸೇನ್ ಭಾಷಾ ನಾಲಬಂದ್, ಮಹಮ್ಮದ್ ಅಮರ್, ಸುಮಾನ್, ಗುಲ್ಷಾಮಾ ಅಲಿ, ಸೋಹೇಲ್ ಅಮರ್ ಸೇರಿದಂತೆ ಇನ್ನು ಹಲವರಿದ್ದರು.

# ಡಾ. ಬಿ. ಆರ್. ಅಂಬೇಡ್ಕರ್ ಜಯಂತಿ, ಡಾ. ಬಾಬು ಜಗಜೀವನರಾಮ ಜಯಂತಿ ಪೂರ್ವಭಾವಿ ಸಭೆ ಪೂರ್ವ ಸಿದ್ಧತೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಸೂಚನೆ

ಬೆಳಗಾವಿ: ವಿಧಾನಸಭಾ ಚುನಾವಣೆ ಘೋಷಣೆ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗುವ ಸಾಧ್ಯತೆಯಿರುವುದರಿಂದ, ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಹಾಗೂ ಡಾ. ಬಾಬು ಜಗಜೀವನರಾಮ ಅವರ ಜಯಂತಿ ಸರ್ಕಾರದ ನಿರ್ದೇಶನದಂತೆ ಅರ್ಥಪೂರ್ಣವಾಗಿ ಆಚರಿಸಲಾಗುವದು, ಸಂಬಂಧಿತ ಅಧಿಕಾರಿಗಳು ಅಗತ್ಯವಿರುವ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.



ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ (ಮಾ.22) ಡಾ. ಬಿ.ಆರ್. ಅಂಬೇಡ್ಕರ್ ಅವರ 132 ನೇ ಜಯಂತಿ ಹಾಗೂ ಡಾ. ಬಾಬು ಜಗಜೀವನರಾಮ್ ಅವರ 116 ನೇ ಜಯಂತಿ ಆಚರಣೆಯ ಕುರಿತ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ಅವರ 132 ನೇ ಜಯಂತಿ ಏಪ್ರಿಲ್ 14 ರಂದು ಬೆಳಿಗ್ಗೆ 10 ಗಂಟೆಗೆ ಡಾ. ಬಾಬಾಸಾಹೇಬ ಅಂಬೇಡ್ಕರ್ ಉದ್ಯಾನವನದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮೂರ್ತಿಗೆ ಮಾಲಾರ್ಪಣೆ ಮಾಡುವುದರ ಮೂಲಕ ಜಯಂತಿಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು.

ಬಳಿಕ ನಗರದ ಧರ್ಮವೀರ ಸಂಭಾಜಿ ವೃತ್ತದಿಂದ ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮಕ್ಕೆ ಅವಶ್ಯವಿರುವ ಪೆಂಡಾಲ್, ಮೈಕ್ ವ್ಯವಸ್ಥೆ, ಕಟೌಟ್, ಆಸನ, ಊಟದ ವ್ಯವಸ್ಥೆ ಸೇರಿದಂತೆ ಇನ್ನಿತರ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕು.

ಅದೇ ರೀತಿಯಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ರಸ್ತೆಗೆ ಲೈಟಿಂಗ್, ಡೇಕಾರೇಶನ್ ಹಾಗೂ ನಗರದ ಪ್ರಮುಖ ವೃತ್ತಗಳನ್ನು ಸ್ವಚ್ಛಗೊಳಿಸಿ, ವಿದ್ಯುತ್ ದೀಪಾಲಂಕಾರ ಮಾಡಬೇಕು ಎಂದು ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು.

**ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ:** ಜಯಂತಿಯ ಪ್ರಯುಕ್ತ ಪರಿಶಿಷ್ಟ ಜಾತಿಯ ಎಸ್.ಎಸ್.ಎಲ್.ಸಿ, ಪಿಯುಸಿ ಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಕೈಗೊಳ್ಳಬೇಕು ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಸಂಘ ಸಂಸ್ಥೆಗಳ ಕಚೇರಿಯಲ್ಲಿ ಕಡ್ಡಾಯವಾಗಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು ಎಂದು ತಿಳಿಸಿದರು.

**ಡಾ. ಬಾಬು ಜಗಜೀವನರಾಮ ಜಯಂತಿ:** ಹಸಿರುಕ್ರಾಂತಿ ಹರಿಕಾರ ಬಾಬು ಜಗಜೀವನರಾಮ್ 116 ನೇ ಜಯಂತಿ ಏಪ್ರಿಲ್ 5 ರಂದು ಆಚರಿಸಲಾಗುತ್ತಿದೆ. ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಮೆರವಣಿಗೆ ಪ್ರಾರಂಭಿಸಿ, ರಾಣಿ ಚನ್ನಮ್ಮ ವೃತ್ತ, ಬಿಮ್ಸ್ ಕಾಲೇಜು, ಸಂಗಮೇಶ್ವರ ಮಾರ್ಗವಾಗಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನರಾಮ ಉದ್ಯಾನವನದಲ್ಲಿ ಕೊನೆಗೊಳ್ಳಲಿದೆ. ಮೆರವಣಿಗೆ ವೇಳೆ ಡೊಳ್ಳು ಕುಣಿತ ಸೇರಿದಂತೆ ಹೆಚ್ಚಿನ ಕಲಾ ತಂಡಗಳು ಭಾಗಹಿಸಲಿವೆ.

ಬಳಿಕ ಬೆಳಿಗ್ಗೆ 11 ಗಂಟೆಗೆ ಡಾ. ಬಾಬು ಜಗಜೀವನರಾಮ ಉದ್ಯಾನವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಊಟದ ವ್ಯವಸ್ಥೆ, ಕುಡಿಯುವ ನೀರು, ಪೆಂಡಾಲ್ ಮತ್ತು ಬ್ಯಾನರ್ ಸೇರಿದಂತೆ ಅಗತ್ಯವಿರುವ ಸಕಲ ಸಿದ್ಧತೆ ಮ ಾಡಿಕೊಳ್ಳಬೇಕು. ಮಹಾನಗರ ಪಾಲಿಕೆ ವತಿಯಿಂದ ನಗರದ ಪ್ರಮುಖ ರಸ್ತೆ, ವೃತ್ತಗಳನ್ನು ಸ್ವಚ್ಛಗೊಳಿಸಿ ದೀಪಾಲಂಕಾರ ಮಾಡಬೇಕು ಎಂದು ಹೇಳಿದರು.

**ಚುನಾವಣಾ ಮಾರ್ಗಸೂಚಿ ಪಾಲನೆಗೆ ಸೂಚನೆ:** ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾದರಿಂದ, ಚುನಾವಣಾ ಮಾರ್ಗಸೂಚಿಯಂತೆ ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ಎಚ್ಚರ ವಹಿಸಲಾಗುವುದು. ಜಯಂತಿ ಕಾರ್ಯಕ್ರಮದ ವೇಳೆ ಪ್ರಚಾರ, ಇನ್ನಿತರ ಸಾಮಗ್ರಿಗಳ ಹಂಚಿಕೆ, ರಾಜಕೀಯ ಪಕ್ಷಗಳ ಪರ ಭಾಷಣ, ಬ್ಯಾನರ್ ಗಳಲ್ಲಿ ಅಭ್ಯರ್ಥಿಗಳ ಚಿತ್ರ ಬಳಕೆ ಸೇರಿದಂತೆ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಜಾಗೃತಿ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಹರ್ಷಲ್ ಭೋಯರ್, ನಗರ ಪೊಲೀಸ್ ಆಯುಕ್ತರಾದ ಡಾ. ಎಂ. ಬಿ ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಂಜೀವ ಪಾಟೀಲ, ಅಪರ ಜಿಲ್ಲಾಧಿಕಾರಿ ಕೆ. ಟಿ ಶಾಂತಲಾ, ಮಹಾನಗರ ಪಾಲಿಕೆ ಆಯುಕ್ತರಾದ ರುದ್ರೇಶ್ ಘಾಳಿ, ಎಸಿಪಿ ಸದಾಶಿವ ಕಟ್ಟಿಮನಿ, ಹಾಗೂ ಸಮಾಜದ ಮುಖಂಡರಾದ ಮಲ್ಲೇಶ ಚೌಗಲೆ, ಗುಂಡು ತಳವಾರ, ಮಲ್ಲೇಶ ಕುರಂಗಿ, ಯಲ್ಲಪ್ಪ ಹುದಲಿ, ದುರ್ಗೇಶ ಮೈತ್ರಿ, ರವಿ ಬಸ್ತವಾಡ, ಮಹೇಶ್ ಕೋಲಕಾರ ಸೇರಿದಂತೆ ಮತ್ತಿತರು ಸಭೆಯಲ್ಲಿ ಉಪಸ್ಥಿತರಿದ್ದರು.

# ವಿದ್ಯುನ್ಮಾನ ಮತ ಯಂತ್ರ ವೀಕ್ಷಿಸಿದ ನ್ಯಾಯಾಧೀಶೆ ಜ್ಯೋತಿ ಪಾಟೀಲ



ಮೂಡಲಗಿ: ಪಟ್ಟಣದ ತಹಶೀಲ್ದಾರ ಕಚೇರಿಯ ಆವರಣದಲ್ಲಿ ಬರುವ ವಿಧಾನ ಸಭೆ ಸಾರ್ವತ್ರಿಕ ಚುನಾವಣಾ ನಿಮಿತ್ಯ ತೇರೆದಿರುವ ವಿದ್ಯುನ್ಮಾನ ಮತದಾನ ಪ್ರಾತ್ಯಕ್ಷಿಕೆ ಕೇಂದ್ರದಲ್ಲಿ ಮೂಡಲಗಿ ದಿವಾಣಿ ಹಾಗೂ ಜೆ.ಎಮ್.ಎಫ್.ಸಿ ನ್ಯಾಯಾಲಯದ ನ್ಯಾಯಾಧೀಶೆ ಜ್ಯೋತಿ ಪಾಟೀಲ ಅವರು ಪ್ರಾತ್ಯಕ್ಷಿಯ ಮತ ಚಲಾಯಿಸುವ ಮೂಲಕ ವಿದ್ಯುನ್ಮಾನ್ ಮತ ಯಂತ್ರವನ್ನು ವೀಕ್ಷಿಸಿದರು.

ತಾಲೂಕಾ ದಂಡಾಧಿಕಾರಿ ಪ್ರಶಾಂತ ಚನಗೊಂಡ ಮಾತನಾಡಿ, ಮತದಾರರಲ್ಲಿ ಗೊಂದಲಗಲ ಪರಿಹಾರಕ್ಕಾಗಿ ಹಾಗೂ ಮಾದರಿ ಮತದಾನ ವಿವರಿಸುವ ಈ ಪ್ರಾತ್ಯಕ್ಷಿಕೆಯ ಪ್ರಯೋಜನವನ್ನು ಎಲ್ಲ ಮತದಾರರು ಪಡೆದುಕೊಂಡು ಇತರರಿಗೂ ಮಾಹಿತಿ ನೀಡಿ. ಹೆಚ್ಚಿನ ಸಂಖ್ಯೆಯಲ್ಲಿ ಮಾತದಾನ ಮಾಡುವಂತೆ ಸಾರ್ವಜನಿಕರಿಗೆ ತಿಳಿಸಿದ ಅವರು ವಿದ್ಯುನ್ಮಾನ ಮತಯಂತ್ರ ಬಗ್ಗೆ ಮಾಹಿತಿಯನ್ನು ಚುನಾವಣೆ ನೀತಿ ಸಂಹಿತೆ ಜಾರಿಯಾಗುವರಿಗೂ ಅರಭಾವಿ ಕ್ಷೇತ್ರದಲ್ಲಿ ಪ್ರತಿ ಹಳ್ಳಿಗಳಲ್ಲಿ ವಿದ್ಯುನ್ಮಾನ ಮತಯಂತ್ರಗಳ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದರು.

ಈ ಸಮಯದಲ್ಲಿ ಅರಭಾವಿ ಮತಕ್ಷೇತ್ರದ ಸೇಕ್ಟರ ಅಧಿಕಾರಿಗಳಾದ ಬಿಇಒ ಅಜೀತ ಮನ್ನಿಕೇರಿ, ತಾ.ಪಂ ಇಒ ಎಫ್.ಜಿ.ಚಿನ್ನನವರ, ಸಿಡಿಪಿ ಯಲ್ಲಪ್ಪ ಗದಾಡಿ ಮತ್ತು ತಾಲೂಕಾ ಶಿರಸ್ತದಾರ ಪರಸಪ್ಪ ನಾಯಿಕ, ಚುನಾವಣಾ ವಿಷಯ ನಿರ್ವಾಹಕ ಪಿ.ಎಸ್.ಕುಂಬಾರ ಹಾಗೂ ಗೋಪಾಲ ಭಸ್ಮೆ ಮತ್ತಿತರರು ಇದ್ದರು.

# ನಾಟಕೋತ್ಸವ, ರಂಗಸಖ ಪ್ರಶಸ್ತಿ ಪ್ರದಾನ ಸಮಾರಂಭ



ಬೆಳಗಾವಿ : ಬೆಳಗಾವಿ ರಂಗಸಂಪದದವರು ದಿ.21 ಮಂಗಳವಾರದಂದು ಬೆಳಿಗ್ಗೆ 10 ಗಂಟೆಗೆ ಚೆನ್ನಮ್ಮ ವೃತ್ತದ ಬಳಿಯಿರುವ ಸಾಹಿತ್ಯ ಭವನ ಸಭಾಭವನದಲ್ಲಿ ಪತ್ರಿಕಾ ಗೋಷ್ಠಿಯನ್ನು ಕರೆದಿದ್ದರು.

ಈ ಪತ್ರಿಕಾಗೋಷ್ಠಿಯಲ್ಲಿ ರಂಗಸಂಪದದ ಅಧ್ಯಕ್ಷರಾದ ಡಾ. ಅರವಿಂದ ಕುಲಕರ್ಣಿಯವರು ಇದೇ ದಿ. 25, 26 ಹಾಗೂ 27 ರಂದು ಪ್ರತಿದಿನ ಸಾಯಂಕಾಲ 6-30 ಕ್ಕೆ ತಿಲಕಚೌಕ ಹತ್ತಿರವಿರುವ ಲೋಕಮಾನ್ಯ ರಂಗಮಂದಿರದಲ್ಲಿ ಹಮ್ಮಿಕೊಂಡಿರುವ ಮೂರು ದಿನಗಳ ನಾಟಕೋತ್ಸವ ಮತ್ತು ರಂಗಸಖ ಪ್ರಶಸ್ತಿ ಪ್ರದಾನ ಸಮಾರಂಭ ಕುರಿತಂತೆ ವಿವರಿಸಿದರು.

ದಿ. 25 ರಂದು ಧಾರವಾಡದ ಲೇಖಕಿ ವಿನುತಾ ಹಂಚಿನಮನಿಯವರು ರಚಿಸಿರುವ ಡಾ. ಅರವಿಂದ ಕುಲಕರ್ಣಿಯವರ ನಿರ್ದೇಶನದ 'ಪಂಚಕನ್ಯಾ ಸ್ಮರೇ ನಿತ್ಯಂ' ನಾಟಕ. ದಿ. 26 ರಂದು ರಾಜೇಂದ್ರ ಕಾರಂತ ರಚನೆಯ ಡಾ. ಅರವಿಂದ ಕುಲಕರ್ಣಿ ನಿರ್ದೇಶನದ ಮುದ್ದಣ್ಣನ ಪ್ರಮೋಷನ್ ಪ್ರಸಂಗ ಎಂಬ ಹಾಸ್ಯನಾಟಕ, ದಿ. 27 ರಂದು ರಾಜಗುರು ಹೊಸಕೋಟೆ ನಿರ್ದೇಶನದ ಫೂಲನದೇವಿ ಜೀವನ ಆಧಾರಿತ ನಾಟಕ 'ಫೂಲನ್ ದೇವಿ' ನಾಟಕ ಹೀಗೆ ಮೂರು ನಾಟಕಗಳು ಪದರ್ಶನಗೊಳ್ಳಲಿವೆ.

2023 ನೇ ಸಾಲಿನ ರಂಗಸಂಪದ ನೀಡುವ 'ರಂಗಸಖ' ಪ್ರಶಸ್ತಿಯು ರಂಗಕರ್ಮಿ ಧಾರವಾಡದ ಅಭಿನಯ ಭಾರತಿಯ ಅಧ್ಯಕ್ಷರಾದ ಅರವಿಂದ ಕುಲಕರ್ಣಿ ಅವರಿಗೆ ಹಾಗೂ ಹಿರಿಯ ಕಲಾವಿದರಾದ ರಮೇಶ ಅನಿಗಳ, ಗಂಗಾಧರ ಬೆನ್ನೂರ ಇವರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಡಾ. ಕುಲಕರ್ಣಿ ಹೇಳಿದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾರತೀಯ ಜೀವ ನಿಗಮದ ಬೆಳಗಾವಿ ಹಿರಿಯ ವಿಭಾಗಾಧಿಕಾರಿಗಳಾದ ಅಜೀತ ವಾರಕರಿ ಆಗಮಿಸಲಿದ್ದು ಹಿರಿಯ ನ್ಯಾಯವಾದಿಗಳು ಮತ್ತು ರಂಗಸಂಪದದ ಪೋಷಕರಾದ ಎಸ್. ಎಂ. ಕುಲಕರ್ಣಿ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ರಂಗಸಂಪದದ ಗೌರವಾಧ್ಯಕ್ಷರಾದ ರಂಗಕರ್ಮಿ ಶ್ರೀಪತಿ ಮಂಜನಬೈಲು ಉಪಸ್ಥಿತರಿರುವರೆಂದು ಎಂದು ಹೇಳಿದರು.

ಪತ್ರಿಕಾ ಗೋಷ್ಠಿಯಲ್ಲಿ ಅಶೋಕ ಕುಲಕರ್ಣಿ, ದಿಲೀಪ ಮಳಗಿ, ಡಾ. ಅರವಿಂದ ಕುಲಕರ್ಣಿ, ಗುರುನಾಥ ಕುಲಕರ್ಣಿ, ಬಸವರಾಜ ಹುಣಚಿಕಟ್ಟಿ ಚಿದಾನಂದ ವಾಳ್ಕೆ, ವೇದಿಕೆ ಮೇಲೆ ಉಪಸ್ಥಿತರಿದ್ದರು.

# ಈ ಭೂಮಿಯಲ್ಲಿ ಮನುಷ್ಯರಾಗಿ ಹುಟ್ಟಿರುವದು ನಮ್ಮೆಲ್ಲರ ಪುಣ್ಯವಾಗಿದೆ: ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಮಾನವರಾಗಿ ಹುಟ್ಟಿದ ಮೇಲೆ ನಾವು ಸಕಲರಿಗೂ ಒಳ್ಳೆಯದನ್ನೇ ಬಯಸಬೇಕು. ಈ ಭೂಮಿಯಲ್ಲಿ ಮನುಷ್ಯರಾಗಿ ಹುಟ್ಟಿರುವದು ನಮ್ಮೆಲ್ಲರ ಪುಣ್ಯವಾಗಿದೆ. ಆದರೆ ಕೆಲವೇ ಕೆಲವು ಜನರು ಈ ಭೂಮಿಯಿಂದ ನಿರ್ಗಮನರಾಗುವಾಗ ದೇವರಾಗಿ ಹೋಗುತ್ತಾರೆ. ಇದಕ್ಕೆ ವಿಜಯಪುರದ ಸಿದ್ಧೇಶ್ವರ ಸ್ವಾಮಿಜಿಗಳೇ ಜ್ವಲಂತ ಉದಾಹರಣೆ ಎಂದು ಶಾಸಕ, ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.



ತಾಲೂಕಿನ ವಡೇರಹಟ್ಟಿ ಗ್ರಾಮದ ಮಲ್ಲಿಕಾರ್ಜುನ ಮಠದಲ್ಲಿ ಸಿದ್ಧೇಶ್ವರ ಸ್ವಾಮಿಜಿಗಳ ನುಡಿ ನಮನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿದ್ಧೇಶ್ವರ ಸ್ವಾಮಿಜಿಗಳು ನಡೆದಾಡುವ ದೇವರು ಎಂದು ಬಣ್ಣಿಸಿದರು.

ಸರಳತೆಗೆ ಹೆಸರಾಗಿ, ಭಕ್ತರಿಗೆ ಪ್ರೀಯರಾಗಿ, ಜೀವನುದ್ದಕ್ಕೂ ಅತ್ಯಂತ ಸಜ್ಜನಿಕೆಯ ಗುಣಗಳನ್ನು ಮೈಗೂಡಿಸಿಕೊಂಡು ಬದುಕಿದ ಸ್ವಾಮಿಜಿಗಳು ನಿಜ ಅರ್ಥದಲ್ಲಿ ಹೇಳಬೇಕಾದರೆ ಅವರು ಭಗವಂತನಾಗಿ ಈ ಭೂಮಿಯಿಂದ ನಿರ್ಗಮಿಸಿದರು. ಕೋಟ್ಯಾಂತರ ಭಕ್ತರನ್ನು ಅನಾಥರನ್ನಾಗಿ ಮಾಡಿ ಪರಮಾತ್ಮನ ಸಂಕಲ್ಪದಂತೆ ಶಿವನಪಾದ ಸೇರಿದರು ಎಂದು ಹೇಳಿದರು.

ದಿ. ಸಿದ್ಧೇಶ್ವರ ಸ್ವಾಮಿಜಿಗಳನ್ನು ಒಂದು ಬಾರಿ ಭೇಟಿ ಮಾಡುವ ಅವಕಾಶ ಒದಗಿಬಂದಿತ್ತು. ಇದು ನನ್ನ ಪಾಲಿಗೆ ಅದೃಷ್ಟವೆಂದು ಹೇಳಬಹುದು. ಅವರೊಂದಿಗೆ ಕಳೆದ ಕ್ಷಣಗಳನ್ನು ಜೀವನದಲ್ಲಿ ಎಂದೂ ಮರೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು.

ರೈತರ ಸೇವೆ ಮಾಡುವ ಸದುದ್ಧೇಶದಿಂದ ಸಚಿವ ಸ್ಥಾನವನ್ನು ನಿರಾಕರಿಸಿ ಕೆಎಮ್‌ಎಫ್ ಅಧ್ಯಕ್ಷನಾಗಿ ಸೇವೆ ಸಲ್ಲಿಸುತ್ತಿದ್ದೇನೆ.

ಈ ಸೇವೆಯಿಂದ ನನಗೆ ತೃಪ್ತಿಯಾಗಿದೆ. ಉತ್ತರ ಕರ್ನಾಟಕದಲ್ಲಿ ರೈತರು ಕೇವಲ ಕಬ್ಬು ಬೆಳೆಯನ್ನೇ ಅವಲಂಭಿಸಿದ್ದಾರೆ.

ಆದರೆ ದಕ್ಷಿಣ ಕರ್ನಾಟಕದಲ್ಲಿ ಹೈನೋದ್ಯಮಕ್ಕೆ ಪ್ರೋತ್ಸಾಹ ನೀಡುತ್ತ ಡೈರಿಗಳಿಗೆ ಹಾಲನ್ನು ಹಾಕುವ ಮೂಲಕ ಹೈನುಗಾರಿಕೆಗೆ ಅಲ್ಲಿನ ಸ್ವತಃ ಮಹಿಳೆಯರೇ ಮುಂದೆ ಬಂದು ಈ ಉದ್ಯಮದಲ್ಲಿ ಕೆಲಸ ಮಾಡುತ್ತಿರುವದು ಗಮನಾರ್ಹವಾಗಿದೆ. ಅಲ್ಲಿನ ಮಾದರಿಯನ್ನು ನಮ್ಮಲ್ಲಿನ ರೈತ ಸಮುದಾಯ ಅಳವಡಿಸಿಕೊಂಡರೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಹೈನುಗಾರಿಕೆ ಬೆಳೆಯುತ್ತದೆ ಎಂದು ಹೇಳಿದರು.

ನಿರುದ್ಯೋಗ ಯುವಕರಿಗೆ ಉದ್ಯೋಗ ಅವಕಾಶಗಳನ್ನು ಸೃಷ್ಟಿಸಲು 487 ವಿವಿಧ ಹುದ್ದೆಗಳಿಗೆ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಕೇವಲ ಒಂದೇ ಜಿಲ್ಲೆಗೆ ಸೀಮಿತಗೊಂಡ ಈ ಹಾಲು ಮಹಾಮಂಡಳದಲ್ಲಿ ನಮ್ಮ ಉತ್ತರ ಕರ್ನಾಟಕ ಸೇರಿದಂತೆ ಈಡೀ ರಾಜ್ಯದ ಪ್ರತಿಭಾವಂತ ಅಭ್ಯರ್ಥಿಗಳಿಗೆ ಅನುಕೂಲವಾಗಲು ಅತ್ಯಂತ ಪ್ರಾಮಾಣಿಕವಾಗಿ ಸಂದರ್ಶನಗಳನ್ನು ನಡೆಸಲಾಗಿದೆ. ಆದರೆ ಕೆಲವರು ಉದ್ದೇಶಪೂರ್ವಕವಾಗಿ ಕೋರ್ಟ ಮೆಟ್ಟಿಲೇರಿದ್ದಾರೆ.

ಅಭ್ಯರ್ಥಿಗಳ ಹಿತಕ್ಕಾಗಿ ಅವರಿಗೆ ನ್ಯಾಯ ಒದಗಿಸಿಕೊಡಲು ನಾವು ಕೂಡ ತಡೆಯಾಜ್ಞೆ ತೆರವುಗೊಳಿಸಲು ಹೋರಾಟ ಮಾಡುತ್ತೇವೆ ಎಂದು ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಸ್ಥಳೀಯ ಗುರುಪ್ರಸಾದ ಮಹಾಸ್ವಾಮಿಗಳು, ಇಳಕಲ್ ಮತ್ತು ವಿಜಯಪುರದ ಮಹಾಸ್ವಾಮಿಗಳು ಈ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು.

ಅಡಿವೆಪ್ಪ ಹಾದಿಮನಿ, ಸಿ.ಎಸ್. ಮೊಟೇಪ್ಪಗೋಳ, ವಿಠ್ಠಲ ಗಿಡೋಜಿ, ರೆಬ್ಬೋಜಿ ಮಳಿವಡ್ಡರ, ಗೋಪಾಲ ಬೀರಣಗಡ್ಡಿ, ನಾರಾಯಣ ತೋಟಗಿ, ನಾಗಪ್ಪ ಪಾಟೀಲ, ಶಂಕರ ಧರ್ಮಟ್ಟಿ, ಗೋಪಾಲ ಕುದರಿ, ಶಿವಪ್ಪ ಗಿಡೋಜಿ, ಲಗಮೇಶ ಬೀರಣಗಡ್ಡಿ, ಬನಪ್ಪ ವಡೇರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಾಲ್ಕೈದು ದಿನಗಳಲ್ಲಿ ರೈತರ ಖಾತೆಗೆ ಪರಿಹಾರ ಹಣ ಜಮಾ ಮಾಡಿ: ಶಾಸಕ ಬಂಡೆಪ್ಪ ಖಾಶೆಂಪುರ್

ಬೀದರ್: ಮುಖ್ಯಮಂತ್ರಿಗಳು ಬೆಳೆ ಹಾನಿ ಪರಿಹಾರಕ್ಕಾಗಿ ಮಂತ್ರಿಗಳ ಹೆಸರು ಹೇಳಬಾರದು. ಕೂಡಲೇ ನಾಲ್ಕೈದು ದಿನಗಳಲ್ಲಿ ರೈತರ ಖಾತೆಗಳಿಗೆ ಪರಿಹಾರದ ಹಣವನ್ನು ಜಮಾ ಮಾಡುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಒತ್ತಾಯಿಸಿದರು.



ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಡಬಾಳ, ನಾಗನಕೇರಾ, ನಿರ್ಣಾ, ಮನ್ನಾಎಖೇಳ್ಳಿ ಸೇರಿದಂತೆ ವಿವಿಧ ಗ್ರಾಮಗಳ ಜಮೀನುಗಳಿಗೆ ಸೋಮವಾರ ಭೇಟಿ ನೀಡಿ ಇತ್ತೀಚೆಗೆ ಸುರಿದ ಅಕಾಲಿಕ ಮಳೆ ಮತ್ತು ಆಣೆಕಲ್ಲುಗಳಿಂದ ಹಾನಿಗೊಳಗಾದ ಉಳ್ಳಾಗಡ್ಡಿ, ಮಾವು, ಟೊಮ್ಯಾಟೊ, ಜೋಳ, ಹೀರೇಕಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಅಧಿಕಾರಿಗಳ ಸಮ್ಮುಖದಲ್ಲಿ ವೀಕ್ಷಿಸಿ ಅವರು ಮಾತನಾಡಿದರು.

ನಾನು ಎರಡು ದಿನಗಳಿಂದ ಸುಮಾರು ಹಳ್ಳಿಗಳ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆಹಾನಿಯನ್ನು ಗಮನಿಸಿದ್ದೇನೆ. ಹೀರೇಕಾಯಿ ಬೆಳೆದ ರೈತನ ತೋಟಕ್ಕೆ ಬಂದು ನೋಡಿದ್ದಿನಿ. ಎರಡೇ ಎರಡು ದಿನಗಳಲ್ಲಿ ಕಟಾವು ಮಾಡಬೇಕಿದ್ದ ಬೆಳೆ ಸಂಪೂರ್ಣ ಹಾಳಾಗಿದೆ. ಇದು ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ ಎಂಬಂತಾಗಿದೆ. ಹೀರೇಕಾಯಿ, ಇರುಳಿ, ಟೊಮ್ಯಾಟೊ, ಜವೆ ಗೋದಿ, ಜೋಳ, ಮಾವು ಸೇರಿದಂತೆ ಅನೇಕ ಬೆಳೆಗಳು ಸಂಪೂರ್ಣ ಹಾಳಾಗಿವೆ.

ಸರ್ಕಾರ ಎನ್.ಡಿ.ಆರ್.ಎಫ್ ನಾರ್ಮ್ ಮೇಲೆ ಹೋಗಬಾರದು. ಅದು ಬಹಳಷ್ಟು ಕಡಿಮೆ ಇದೆ. ಕೃಷಿ ಬೆಳೆಗಳಿಗೆ ಎಕರೆಗೆ 25 ಸಾವಿರ ರೂ. ತೋಟಗಾರಿಕೆ ಬೆಳೆಗಳಿಗೆ ಎಕರೆಗೆ 50 ಸಾವಿರ ರೂ. ಪರಿಹಾರ ಧನವನ್ನು ನೀಡಬೇಕು. ಆಗಾದರೆ ಮಾತ್ರ ರೈತರು ಉಸಿರಾಡಲು ಸಾಧ್ಯವಾಗುತ್ತದೆ. ಸದ್ಯ ರೈತರು ಬಹಳಷ್ಟು ಆತಂಕದಲ್ಲಿದ್ದಾರೆ. ನಮ್ಮ ಭಾಗದಲ್ಲಿ ಆಣೆಕಲ್ಲಿನಿಂದ ಅನೇಕ ಬೆಳೆಗಳು ಹಾನಿಯಾಗಿವೆ. ಮುಖ್ಯಮಂತ್ರಿಗಳು ರೈತರ ಪರವಾಗಿ ಧಾವಿಸಿ ಬರಬೇಕು. ರೈತರಿಗೆ ಕೂಡಲೇ ನಾಲ್ಕೈದು ದಿನಗಳಲ್ಲಿ ಪರಿಹಾರ ಒದಗಿಸುವ ಕೆಲಸ ಮಾಡಬೇಕು ಎಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಸರ್ಕಾರಕ್ಕೆ ಮನವಿ ಮಾಡಿದರು.



ಮೂಡಲಗಿ: ನವದೆಹಲಿಯಲ್ಲಿ ಕೇಂದ್ರ ಶಿಕ್ಷಣ ಇಲಾಖೆ ಸಚಿವರು ಹಾಗೂ ರಾಜ್ಯ ಬಿಜೆಪಿ ಚುನಾವಣಾ ಉಸ್ತುವಾರಿ ಧರ್ಮೇಂದ್ರ ಪ್ರಧಾನ ಜೀ ಅವರನ್ನು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಭೇಟಿಯಾಗಿ ಯುಗಾದಿ ಹಬ್ಬದ ಶುಭಾಶಯಗಳ ಕೋರಿ, ಮುಂಬರುವ ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನಲೆ ಪಕ್ಷದ ಸಂಘಟನೆ ಕುರಿತು ಅವರೊಂದಿಗೆ ಚರ್ಚಿಸಿದರು.

# ಅನಮೋಡ ಅಬಕಾರಿ ಇಲಾಖೆಯಿಂದ 158 ಲೀಟರ್ ಗೋವಾ ಮದ್ಯ ವಶ





ವರದಿ: ಬ್ರಹ್ಮಾನಂದ ಪತ್ತಾರ.

ಅಬಕಾರಿ ಜಂಟಿಆಯುಕ್ತರು ಮಂಗಳೂರು ವಿಭಾಗ ಮಂಗಳೂರು. ಹಾಗೂ ಮಾನ್ಯ ಜಗದೀಶ ಎನ್ ಕೆ ಅಬಕಾರಿ ಉಪ ಆಯುಕ್ತರು ಉತ್ತರ ಕನ್ನಡ ಜಿಲ್ಲೆ ಕಾರವಾರ ರವರ ನಿರ್ದೇಶನದ ಮೇರೆಗೆ ಹಾಗೂ ಶ್ರೀ ಶಂಕರಗೌಡ ಪಾಟೀಲ ಮಾನ್ಯ ಅಬಕಾರಿ ಉಪ ಅಧೀಕ್ಷಕರು ಯಲ್ಲಾಪುರ ಉಪವಿಭಾಗ ಯಲ್ಲಾಪುರ ರವರ ಮಾರ್ಗದರ್ಶನ ಮೇರೆಗೆ ದಿನಾಂಕ. 21/03/ 2023 ರಂದು ಬೆಳಿಗ್ಗೆ 9:30 ಗಂಟೆ ಸಮಯಕ್ಕೆ ಜೋಯಿಡಾ ತಾಲೂಕಿನ ಅನಮೋಡ ಗ್ರಾಮದ ಅಬಕಾರಿ ತನಿಖಾ ಠಾಣೆಯ ಮುಂಭಾಗದಲ್ಲಿ ಖಚಿತ ಮಾಹಿತಿ ಮೇರೆಗೆ ವಾಹನ ತಪಾಸಣಿ ಮಾಡುತ್ತಿದ್ದಾಗ ನೋಂದಣಿ ಸಂಖ್ಯೆ GJ 01 DU 0522 ದರಲ್ಲಿ 158.400 ಲೀಟರ್ ಗೋವಾ ಮದ್ಯ ಸಾಗಾಟ ಮಾಡುತ್ತಿದ್ದ ಫಿರೋಜ ಹಾಜಿಭಾಯಿ ಬ್ಲೋಚ ,ಜುನಾಗಢ ಗುಜರಾತ ಎಂಬುವನನ್ನು ದಸ್ತಗಿರಿ ಮಾಡಲಾಗಿದ್ದು ವಾಹನ ಮಾಲೀಕನನ್ನು ಪತ್ತೆ ಹಚ್ಚಬೇಕಾಗಿದೆ.

ಅಬಕಾರಿ ದಾಳಿಯಲ್ಲಿ ಅಬಕಾರಿ ಉಪನಿರೀಕ್ಷಕ ರಾದ ಶ್ರೀಕಾಂತ ಬಿ ಅಸೂದೆ, ಅಬಕಾರಿ ಪೇದೆಗಳಾದ, ಬಾಲಕೃಷ್ಣ ಕೆ, ಆರ್ ಎನ್ ನಾಯಕ, ಯು ಎನ್ ತುಳಜಿ ಪಾಲ್ಗೊಂಡಿರುತ್ತಾರೆ. ಅಬಕಾರಿ ಸ್ವತ್ತು ಹಾಗೂ ವಾಹನದ ಅಂದಾಜು ಮೌಲ್ಯ 564800/- ಆಗಿರುತ್ತದೆ- ಎಂದು ಅಂದಾಜಿಸಲಾಗಿದೆ. ತನಿಖೆಯನ್ನು ಮುಂದುವರಿಸಲಾಗಿದೆ.

# ಡೋಣಿ ಗ್ರಾಮದಲ್ಲಿ ಮತ್ತೆ ಚಿರತೆ ಪ್ರತ್ಯಕ್ಷ



ಗದಗ: ಎದುರಿಗೆ ಬಂದ ಚಿರತೆಯನ್ನು ಕಂಡು ವಾಹನ ಸವಾರರು ಆತಂಕಕ್ಕೆ ಒಳಗಾದ ಘಟನೆ ಗದಗ ಜಿಲ್ಲೆಯಲ್ಲಿ ನಡೆದಿದೆ.

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡೋಣಿ ಗ್ರಾಮದ ಬಳಿಯ ಕಪ್ಪತ್ತಗುಡ್ಡದಲ್ಲಿ ಚಿರತೆಯೊಂದು ಪ್ರತ್ಯಕ್ಷವಾಗಿದೆ. ಕಪ್ಪತ್ತಗುಡ್ಡದ ಗಾಳಿಗುಂಡಿ ಬಸವಣ್ಣ ದೇವಸ್ಥಾನದ ಬಳಿ ಸ್ಕಾರ್ಪಿಯೋ ವಾಹನದಲ್ಲಿ ಹೋಗುತ್ತಿದ್ದ ಸಂದರ್ಭ ಚಿರತೆ ಕಂಡು ಬಂದಿದೆ.

ರಸ್ತೆ ಮಧ್ಯ ಚಿರತೆ ಅಲ್ಲಾಡದಂತೆ ಗಾಂಭೀರ್ಯವಾಗಿ ನಿಂತುಕೊಂಡಿದ್ದರಿಂದ ಒಂದು ಕ್ಷಣ ವಾಹನ ಸವಾರರು ಭಯಭೀತರಾಗಿದ್ದಾರೆ. ಈ ದೃಶ್ಯವನ್ನು ಮೊಬೈಲ್‌ನಲ್ಲಿ ಸೆರೆ ಹಿಡಿಯಲಾಗಿದೆ.

ಘಟನೆಯಿಂದ ಕಪ್ಪತ್ತಗುಡ್ಡ ಸೆರಗಿನ ಗ್ರಾಮಗಳಲ್ಲಿ ಆತಂಕ ಹೆಚ್ಚಿದೆ. ಕಪ್ಪತ್ತಗುಡ್ಡಕ್ಕೆ ಬರುವ ಜನರಿಗೆ ಚಿರತೆ ನೋಡಿದ ಸ್ಥಳೀಯರು ಎಚ್ಚರಿಕೆ ನೀಡಿದ್ದಾರೆ. ಚಿರತೆ ಸೆರೆ ಹಿಡಿಯುವಂತೆ ಅರಣ್ಯ ಇಲಾಖೆಗೆ ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಹಿಂದೆಯೂ ಕಪ್ಪತ್ತ ಮಲ್ಲೇಶ್ವರ ದೇವಸ್ಥಾನದ ಬಳಿ, ಕಡಕೋಳ ಭಾಗ ಹಾಗೂ ಮೈನಿಂಗ್ ಪ್ರದೇಶಲ್ಲಿ ಚಿರತೆ ಸೆರೆಹಿಡಿಯಲಾಗಿದೆ. ಗಾಳಿಗುಂಡಿ ಬಸವಣ್ಣ ಬಳಿ ಪ್ರತ್ಯಕ್ಷವಾದ ಚಿರತೆ ವೀಡಿಯೋ ಎಲ್ಲೆಡೆ ವೈರಲ್ ಆಗಿದ್ದು, ಅರಣ್ಯ ಇಲಾಖೆ ಸಿಬ್ಬಂದಿ ಶೋಧ ಕಾರ್ಯಕ್ಕೆ ಮುಂದಾಗಿದ್ದಾರೆ.

# ನಮ್ಮ ನಾಡಿನ ಹಬ್ಬಗಳು, ಸಂಪ್ರದಾಯಗಳು ನೈಸರ್ಗಿಕ ಬದಲಾವಣೆಗಳ ಮೇಲೆ ನಿರ್ಧರಿತವಾಗಿವೆ: ಗಿರೆಣ್ಣವರ

ಮೂಡಲಗಿ: ಪ್ರಾಚೀನ ಕಾಲದಿಂದಲೂ ನಮ್ಮ ನಾಡಿನ ದೇಶದ ಸಂಸ್ಕೃತಿ ಸಂಸ್ಕಾರಗಳಲ್ಲದೇ ಹಬ್ಬ ಹರಿದಿನಗಳು ಆಚರಣೆಗಳೂ ಕೂಡ ನಮ್ಮ ನೈಸರ್ಗಿಕ ಬದಲಾವಣೆಗಳಿಗೆ ತಕ್ಕಂತೆ ನಿರ್ಧರಿತವಾಗಿವೆ ಎಂದು ಪ್ರಧಾನ ಗುರು ಎ.ವ್ಹಿ ಗಿರೆಣ್ಣವರ ಹೇಳಿದರು.




ಅವರು ತಾಲೂಕಿನ ತುಕ್ಕಾನಟ್ಟಿಯ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಯುಗಾದಿ ಆಚರಣೆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಬೇವು ಬೆಲ್ಲ ವಿತರಿಸಿ ಮಾತನಾಡಿ, ನಮ್ಮ ಪೂರ್ವಜರಿಗೆ ಪ್ರಕೃರ್ತಿ ವಿಸ್ಮಯ ವಿಜ್ಞಾನ ವೈಜ್ಞಾನಿಕತೆ ಬಗ್ಗೆ ಆಗಲೇ ತಿಳಿದುಕೊಂಡಿದ್ದರು. ಅದರ ಅಧಾರದ ಮೇಲೆಯೇ ಆಹಾರ ವಿಹಾರ ಸಂಪ್ರದಾಯ ಹಬ್ಬ ಹರಿದಿನಗಳ ಆಚರಣೆ ಆರೋಗ್ಯ ಎಲ್ಲವನ್ನೂ ವಿಜ್ಞಾನ, ಪ್ರಕೃತಿ, ಆದ್ಯಾತ್ಮದೊಂದಿಗೆ ಮೇಳೈಸಿಕೊಂಡು ತಮ್ಮದೇ ಆದ ಪದ್ದತಿಯೊಂದಿಗೆ ಬದುಕನ್ನು ಜೀವಿಸುತ್ತಾ ಆರೋಗ್ಯವಾಗಿದ್ದರು. ಈ ನಮ್ಮ ಸಂಸ್ಕೃತಿ ಹಬ್ಬಗಳ ಹಿನ್ನೆಲೆ ಆಚರಣೆಯ ಪದ್ಧತಿ ಎಲ್ಲವುಗಳನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಹೊಸ ವರ್ಷವೆಂದರೆ ನಮಗೆ ಯುಗಾದಿ. ಆದ ಕಾರಣ ಇವತ್ತು ಎಲ್ಲ ವಿದ್ಯಾರ್ಥಿಗಳಿಗೆ ಬೇವು ಬೆಲ್ಲ ಸಿಹಿ ತಿಂಡಿಯನ್ನು ವಿತರಿಸುವ ಮೂಲಕ ಆಚರಿಸಲಾಗುತ್ತಿದೆ ಎಂದರು.

ಸಹ ಶಿಕ್ಷಕ ಮಹಾದೇವ ಗೋಮಾಡಿ ಮಾತನಾಡಿ, ಭಾರತಿಯ ಸಂಸ್ಕೃತಿಯಲ್ಲಿ ಎಲ್ಲಾ ಹಬ್ಬಗಳು ವಿಶೇಷ ಸ್ಥಾನ ಹೊಂದಿವೆ. ಪ್ರತಿಯೊಂದು ಹಬ್ಬವು ಪೌರಾಣಿಕ, ಐತಿಹಾಸಿಕ ಹಿನ್ನೆಲೆಗಳನ್ನು ಹೊಂದಿದ್ದು ಜನರ ಜೀವನದಲ್ಲಿ ಹಾಸು ಹೊಕ್ಕಾಗಿವೆ. ಯುಗಾದಿ ಹಬ್ಬವನ್ನು ಹಿಂದೂ ಸಂಸ್ಕೃತಿಯ ಹೊಸ ವರ್ಷದ ಪ್ರಾರಂಬ ಹಬ್ಬ ಎಂದು ಕರೆಯುತ್ತಾರೆ. ಚೈತ್ರ ಮಾಸದ ಪ್ರಾರಂಭ ಚಿಗುರೆಲೆಯ ಸಸ್ಯಗಳು ಸೂರ್ಯನ ಬಿರು ಬಿಸಿಲು ಇವು ಯುಗಾದಿ ಪ್ರಾರಂಭದ ಸಂಕೇತಗಳಾಗಿವೆ. ಬೇವು ಬೆಲ್ಲ ಸಿಹಿಕಹಿಯ ಸಂಕೇತಗಳಾಗಿವೆ. ಜೀವನದಲ್ಲಿ ಸುಖ-ದುಃಖಗಳನ್ನು ಸಮಾನವಾಗಿ ಸ್ವೀಕರಿಸುವದರ ಸಂಕೇತವಾಗಿ ಈ ಹಬ್ಬವನ್ನು ಆಚರಿಸುತ್ತೇವೆ ಎಂದರು.

ಈ ಸಂದರ್ಭದಲ್ಲಿ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೆ ಬೇವು-ಬೆಲ್ಲ ವಿತರಿಸಿ ಮಕ್ಕಳಿಗೆ ಯುಗಾದಿ ಹಬ್ಬದ ಮಹತ್ವ ತಿಳಿಸಿ ಸಿಹಿ ಊಟ ಬಡಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಕುಸುಮಾ ಚಿಗರಿ, ವಿಮಲಾಕ್ಷಿ ತೋರಗಲ್ಲ, ಶೀಲಾ ಕುಲಕರ್ಣಿ, ಪುಷ್ಪಾ ಭರಮದೆ, ಲಕ್ಷ್ಮೀ ಹೆಬ್ಬಾಳ, ಜ್ಯೋತಿ ಉಪ್ಪಾರ, ಶಂಕರ ಲಮಾಣಿ, ಶಿವಲೀಲಾ ಹಣಮನ್ನವರ, ರೇಖಾ ಗದಾಡಿ, ಖಾತೂನ ನದಾಫ, ಹೊಳೆಪ್ಪ ಗದಾಡಿ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089